# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 76 | ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 | ಚಿತ್ರದುರ್ಗ | ದಿನಾಂಕ: 29–09–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 76 | Title- Code: KARKAN 28269 | Chitradurga | Date: 29-09-2023 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಚಳ್ಳಕೆರೆ ಶಾಸಕರ ಭವನ ಎಲ್ಲರಿಗೂ ಆದರ್ಶ ಕೇಂದ್ರ: ಡಾ.ಶಿವಮೂರ್ತಿ ಸ್ವಾಮೀಜಿ 2

ಲಸಿಕೆ ನೀಡುವ ಮೂಲಕ ಜಾನುವಾರಗಳ ಪ್ರಾಣ ರಕ್ಷಣೆಗೆ ಮುಂದಾಗಿ: ಟಿ.ರಘುಮೂರ್ತಿ 3

ಬಲಪಂಥೀಯರಿಗೆ ಹೊಸ ದಿಕ್ಕು ತೋರಿದ ನಾಯಕ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಅ.01 ರಂದು ವಿಶ್ವ ಹಿರಿಯ ನಾಗರೀಕರ ದಿನಾಚರಣೆ

**ದಾವಣಗೆರೆ:** ಅಕ್ಟೋಬರ್ 01 ರಂದು ನಗರದ ಎಂಸಿಸಿ 'ಬಿ' ಬ್ಲಾಕ್, ಕುವೆಂಪು ನಗರದ ಮುಖ್ಯರಸ್ತೆ ಪದ್ಮಶ್ರೀ ಚಿಂದೋಡಿಲೀಲಾ ಕಲಾ ಕ್ಷೇತ್ರದಲ್ಲಿ "ವಿಶ್ವ ಹಿರಿಯ ನಾಗರೀಕರ ದಿನಾಚರಣೆ–ಕಾರ್ಯಕ್ರಮ ಏರ್ಪಡಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಎಸ್.ಎಸ್. ಕೇರ್ ಟ್ರಸ್ಟ್, ಜಿಲ್ಲಾ ಹಿರಿಯ ನಾಗರಿಕರ ಸಂಘ (ರಿ.), ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘ, ಆದರ್ಶ ಸಮಾಜ ಕಾರ್ಯ ಸಂಸ್ಥೆ, ಹಾಗೂ ಜಿಲ್ಲೆಯಲ್ಲಿ ಹಿರಿಯ ನಾಗರೀಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳು ಸಹಯೋಗದಲ್ಲಿ ಕಾರ್ಯಕ್ರಮ ಏರ್ಪಡಿಸಿದೆ. ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿಸಚಿವರಾದಎಸ್.ಎಸ್.ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ದಕ್ಷಿಣ ಕ್ಷೇತ್ರದ ಶಾಸಕರು ಹಾಗೂ ಹಿರಿಯ ನಾಗರೀಕರ ಸಂಘದ ಮಹಾಪೋಷಕರಾದ ಡಾ.ಶಾಮನೂರು ಶಿವಶಂಕರಪ್ಪ ಇವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಜಿ.ಎಂ. ಸಿದ್ದೇಶ್ವರ, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ, ರವಿಕುಮಾರ್ ಎನ್, ಡಾ. ತೇಜಸ್ವಿನಿಗೌಡ, ಎಸ್.ಎಲ್ ಭೋಜೇಗೌಡ, ವೈ.ಎ. ನಾರಾಯಣಸ್ವಾಮಿ, ಚಿದಾನಂದ. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ದಾವಣಗೆರೆ ಜಿಲ್ಲಾ ಹಿರಿಯ ನಾಗರಿಕರ ಸಂಘದ ಅಧ್ಯಕ್ಷರಾದ ಎಸ್.ಟಿ ಕುಸುಮ ಶ್ರೇಷ್ಠಿ, ಎಸ್ ಗುರುಮೂರ್ತಿ, ವಾಸಂತಿ ಉಪ್ಪಾರ್, ಕೆ.ಕೆ ಪ್ರಕಾಶ್, ಕೆ ಉಪಸ್ಥಿತರಿರುವರು.

### ಎನ್‌ಎಂಎಂಎಸ್ ಪರೀಕ್ಷೆಗೆ ಅರ್ಜಿ

**ದಾವಣಗೆರೆ:** ಎನ್‌ಎಂಎಂಎಸ್ ಪರೀಕ್ಷೆಯನ್ನು ಡಿ.17 ರಂದು ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು ಏಖಕಿಂಂಅ ವತಿಯಿಂದ ನಡೆಸಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎನ್‌ಎಂಎಂಎಸ್ ಪರೀಕ್ಷೆಯನ್ನು ಸರ್ಕಾರಿ, ಸ್ಥಳೀಯ ಸಂಸ್ಥೆಗಳ ಶಾಲೆಗಳು, ಅನುದಾನಿತ, ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು https://kseab.karnataka.gov.in ವೆಬ್ ಸೈಟ್‌ನಲ್ಲಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ಅ.4 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿ, ಹಾಗೂ ಜಿಲ್ಲಾ ಎನ್‌ಎಂಎಂಎಸ್ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದಲ್ಲಿ ಎನ್‌ಎಂಎಂಎಸ್ ಜಿಲ್ಲಾ ನೋಡಲ್ ಅಧಿಕಾರಿ ಮಂಜುನಾಥಚಾರಿ ಬಿ ಮೊ.ಸಂ:–8660520686 ಸಂಪರ್ಕಿಸಲು ಡಯಟ್ ಪ್ರಾಚಾರ್ಯರು ಹಾಗೂ ಪದನಿಮಿತ್ತ ಉಪನಿರ್ದೇಶಕರು ಗೀತಾ.ಎಸ್ ತಿಳಿಸಿದ್ದಾರೆ.

### ವಿಶೇಷಚೇತನರಿಗೆ ಕೃತಕ ಅಂಗ ಜೋಡಣೆ ಶಿಬಿರ

**ದಾವಣಗೆರೆ:** ರೋಟರಿ ಕ್ಲಬ್ ಆಫ್ ಬೆಂಗಳೂರು ಜಂಕ್ಷನ್ ಸಮಿತಿ ವತಿಯಿಂದ ವಿಶೇಷ ಚೇತನರಿಗೆ ಸೆಪ್ಟೆಂಬರ್ 30 ರಿಂದ ಅಕ್ಟೋಬರ್ 2 ರವರೆಗೆ ಬೆಂಗಳೂರಿನ ಶ್ರೀ ಚಂದ್ರಶೇಖರ ಭಾರತಿ ಕಲ್ಯಾಣ ಮಂಟಪ, 29/1, ಪಂಪ ಮಹಾಕವಿ ರಸ್ತೆ, ಶಂಕರಪುರಂ ಇಲ್ಲಿ ಉಚಿತ ಮೆಗಾ ಕೃತಕ ಅಂಗ ಜೋಡಣೆ ಶಿಬಿರವನ್ನು ಏರ್ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರೇಖಾ–9945486688, ಲಕ್ಷ್ಮಿ–6363234044, ಪವಿತ್ರಾ–9538454596, ಶಂಕರ್ ಲಾಲ್ ಅಗರ್ವಾಲ್ (ಅಧ್ಯಕ್ಷರು) 9342069904, ಮುರಳಿ ಅಗರ್ವಾಲ್ (ಸಿಎಸ್ ನಿರ್ದೇಶಕರು)–9611108153, ಜಿತೇಂದ್ರ ಶೆಟ್ಟಿ(ಕಾರ್ಯದರ್ಶಿ)–9845066469, ಸುರೇಶಅರಕೆರೆ (ಅಧ್ಯಕ್ಷರು)–9845283458 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ. ಕೆ.ಕೆ ಪ್ರಕಾಶ್ ತಿಳಿಸಿದ್ದಾರೆ.

# ಇಂದು ಕರ್ನಾಟಕ ಬಂದ್

» **ಬೆಂಗಳೂರು**

ತಮಿಳುನಾಡಿಗೆ ಕಾವೇರಿ ನೀರು ಹರಿಸಿರುವುದನ್ನು ಖಂಡಿಸಿ ನಾಳೆ ಕರ್ನಾಟಕ ಬಂದ್‌ಗೆ ಕರೆ ನೀಡಲಾಗಿದೆ. ನೂರಾರು ಸಂಘಟನೆಗಳು ಬಂದ್‌ಗೆ ಸಂಪೂರ್ಣ ಬೆಂಬಲ ನೀಡಿದ್ದು, ನಾಳೆ ಇಡೀ ರಾಜ್ಯವೇ ಸ್ತಬ್ಧವಾಗುವ ಸಾಧ್ಯತೆ ಇದೆ. ಬಂದ್ ಯಶಸ್ವಿ ಮಾಡಲು ಕನ್ನಡಪರ ಹಾಲೂ ರೈತ ಪರ ಸಂಘಟನೆಗಳಿಂದ ಭಾರೀ ತಯಾರಿ ನಡೆದಿದೆ.

ಈಗಾಗಲೇ ಇಡೀ ರಾಜ್ಯಕ್ಕೆ ಕನ್ನಡಪರ ಸಂಘಟನೆಗಳು ಸಂದೇಶ ಕೊಟ್ಟಿವೆ. ಕಳೆದ ಮಂಗಳವಾರವಷ್ಟೇ ಬೆಂಗಳೂರು ಬಂದ್ ಆಚರಿಸಲಾಯಿತು. ಇದೀಗ ಅಖಂಡ ಕರ್ನಾಟಕ ಬಂದ್ ಆಚರಣೆಗೆ ಸಕಲ ತಯಾರಿ ನಡೆಯುತ್ತಿದೆ. ಬೆಂಗಳೂರು ಬಂದ್ ದಿನವೇ ಕನ್ನಡಿಗರಿಗೆ ಮತ್ತೊಂದು ಆಘಾತ ಉಂಟಾಯಿತು. ತಮಿಳುನಾಡಿಗೆ ಪ್ರತಿನಿತ್ಯ ಮೂರು ಸಾವಿರ ಕ್ಯೂಸೆಕ್ ನೀರನ್ನು ಹರಿಸಲು ಅಂದು ನಡೆದ ಸಭೆಯಲ್ಲಿ ಕಾವೇರಿ ನೀರು ನಿಯಂತ್ರಣ ಸಮಿತಿ (ಅಘಖಅ) ಶಿಫಾರಸು ಮಾಡಿತು. ಇದರಿಂದ ರೈತರ ಆಕ್ರೋಶದ ಕಟ್ಟೆ ಹೊಡೆದಿದ್ದು, ನಾಳಿನ ಬಂದ್ ಪರಿಣಾಮ ಹೆಚ್ಚಾಗಿರಲಿದೆ ಎಂದು ಊಹಿಸಲಾಗಿದೆ.

ಬಂದ್ ಹಿನ್ನೆಲೆಯ್ಲಲಿ ನಾಳೆ ರಾಜ್ಯದಲ್ಲಿ ಏನೆಲ್ಲ ಸೇವೆಗಳು ಇರುತ್ತವೆ ಮತ್ತು ಏನೆಲ್ಲ ಬಂದ್ ಆಗಲಿವೆ ಎಂಬುದನ್ನು ನಾವೀಗ ತಿಳಿಯೋಣ.ಕರ್ನಾಟಕದಿಂದ ತಮಿಳುನಾಡಿಗೆ 15 ದಿನಗಳವರೆಗೆ ಪ್ರತಿದಿನ 5 ಸಾವಿರ ಕ್ಯೂಸೆಕ್ ನೀರನ್ನು ಹರಿಸಬೇಕೆಂದುಸೆ.12ರಂದುಕಾವೇರಿನೀರು ನಿಯಂತ್ರಣ ಸಮಿತಿ (ಅಘಖಅ) ನೀಡಿದ್ದ ಆದೇಶವನ್ನು ಪಾಲಿಸುವಂತೆ ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರ (ಅಘಒಂ) ಸೆ.18ರಂದು ಆದೇಶ ಹೊರಡಿಸಿತ್ತು. ಇದರ ವಿರುದ್ಧ ಸುಪ್ರೀಂಕೋರ್ಟ್‌ಗೆ ಕರ್ನಾಟಕ ಮೇಲ್ಮನವಿ ಸಲ್ಲಿಸಿತ್ತು. ಸೆ.21ರಂದು ತೀರ್ಪು ಪ್ರಕಟಿಸಿದ ನ್ಯಾಯಾಲಯ ಅಘಒಂ ಆದೇಶವನ್ನು ಎತ್ತಿಹಿಡಿದಿತ್ತು. ಅದರಂತೆ ರಾಜ್ಯ ಸರ್ಕಾರ ನೀರು ಬಿಡುಗಡೆ ಸಹ ಮಾಡಿತು. ಅತ್ತ ಸಂಘಟನೆಗಳು ಬಂದ್ ಸಹ ಆಚರಿಸಿದವು. ಇದರ ನಡುವೆ ಮತ್ತೆ 3000 ಸಾವಿರ ಕ್ಯೂಸೆಕ್ ನೀರು ಹರಿಸಲು ಕಾವೇರಿ ನದಿ ನೀರು ಸಮಿತಿ ಶಿಫಾರಸು ಮಾಡಿರುವುದರಿಂದ ನಾಳಿನ ಕರ್ನಾಟಕ ಬಂದ್ ತೀವ್ರತೆ ಪಡೆದುಕೊಳ್ಳುವ ಎಲ್ಲ ಲಕ್ಷಣಗಳು ಗೋಚರಿಸುತ್ತಿವೆ.

**ಇಂದು ಸಹ ಪ್ರಚಾರ:** ನಾಳಿನ ಕರ್ನಾಟಕ ಬಂದ್‌ಗೆ ಇಂದು ಸಹ ಅಬ್ಬರದ ಪ್ರಚಾರ ನಡೆಯಲಿದೆ. ವಾಟಳ್ ನಾಗರಾಜ್ ನೇತೃತ್ವದಲ್ಲಿ ಬಂದ್‌ಗೆ ಬೆಂಬಲ ನೀಡುವಂತೆ ವಿವಿಧ ಸಂಘಟನೆಗಳು ಮನವಿ ಮಾಡಲಿವೆ. ನಗರ ಹಲವು ಕಡೆ ತೆರದ ವಾಹನದ ಮುಖಾಂತರ ವಾಟಳ್ ನಾಗರಾಜ್ ಮನವಿ ಮಾಡಲಿದ್ದಾರೆ. ನಿನ್ನೆ ಮಾಲ್, ಮಾರುಕಟ್ಟೆ ಸೇರಿ ಹಲವು ಕಡೆ ಹೋಗಿ ಪ್ರಚಾರ ಮಾಡಿದರು.



**ಏನೇನಿರುತ್ತೆ..?**

- ಆಸ್ಪತ್ರೆ
- ಮೆಡಿಕಲ್ ಸ್ಟೋರ್
- ಹಾಲಿನ ಬೂತ್
- ಅಗತ್ಯ ವಸ್ತುಗಳು
- ಮೆಟ್ರೋ
- ಆಂಬ್ಯುಲೆನ್ಸ್



**ಏನೇನಿರಲ್ಲ?**

- ಆಟೋ, ಕ್ಯಾಬ್
- ಗೂಡ್ಸ್ ವಾಹನಗಳು
- ಖಾಸಗಿ ಬಸ್‌ಗಳು
- ಥಿಯೇಟರ್
- ಸೂಪರ್ ಮಾರ್ಕೆಟ್
- ಪೆಟ್ರೋಲ್ ಬಂಕ್
- ಶಾಲಾ -ಕಾಲೇಜ್
- ಅಂಗಡಿಗಳು
- ಜ್ಯುವೆಲ್ಲರಿ ಶಾಪ್‌ಗಳು
- ಕೈಗಾರಿಕೆಗಳು
- ಹೋಟೆಲ್‌ಗಳು
- ಮಾಲ್‌ಗಳು
- ಬೀದಿ ಬದಿ ಅಂಗಡಿಗಳು
- ಬಿಎಂಟಿಸಿ ಬಸ್



# ನಗರದಲ್ಲಿ ಸಂಭ್ರಮದ ಈದ್‌ಮಿಲಾದ್

» **ಚಿತ್ರದುರ್ಗ**

ಶಾಂತಿ ಧೂತ ಪ್ರವಾದಿ ಮಹಮದ್ ಪೈಗಂಬರ್‌ರವರ ಜನ್ಮದಿನದ ಅಂಗವಾಗಿ ಗುರುವಾರ ನಗರದಲ್ಲಿ ಈದ್‌ಮಿಲಾದ್ ಮೆರವಣಿಗೆ ವಿಜೃಂಭಣೆಯಿಂದ ನಡೆಯಿತು.

ಬಡಾಮಕಾನ್‌ನಿಂದ ಹೊರಟ ಮೆರವಣಿಗೆ ಬಸವೇಶ್ವರ ಚಿತ್ರಮಂದಿರದ ಮುಂಭಾಗದಿಂದ ಆಜಾದ್‌ನಗರ, ಹಿಮ್ಮತ್‌ನಗರ, ಹೊರಪೇಟೆ, ಉಮರ್ ಸರ್ಕಲ್, ಎಸ್.ಬಿ.ಎಂ. ವೃತ್ತ, ಗಾಂಧಿವೃತ್ತ, ದೊಡ್ಡಪೇಟೆ, ಕೋಳಿಬುರುಜನಹಟ್ಟಿ, ಆಲಿಮೊಹಲ್ಲಾ, ಅಗಸನಕಲ್ಲು ಮುಖಾಂತರ ಮಂಡಕ್ಕಿಭಟ್ಟಿಯಲ್ಲಿರುವಮಸೀದಿಗೆತಲುಪಿದಾಗ ಪ್ರಾರ್ಥನೆ ಸಲಿಸಿ ಸಂಜೆ ಗಾಂಧಿವೃತ್ತದಲ್ಲಿ ಮೆರವಣಿಗೆ ಮುಕ್ತಾಯಗೊಂಡಿತು.

ಹಸಿರು ಬಳಿ ಕಪ್ಪು ಬಣ್ಣದ ಭಾವುಟಗಳನ್ನು ಕೈಯಲ್ಲಿ ಹಿಡಿದು ಸಾಗುತ್ತಿದ್ದ ಮುಸ್ಲಿಂ ಯುವಕರು ಅಲ್ಲಲ್ಲಿ ಭಾವುಟಗಳನ್ನು ತಿರುಗಿಸಿ ಖುಷಿ ಪಡುತ್ತಿದ್ದರೆ ಇನ್ನು ಕೆಲವರು ಜಿಂದಾಬಾದ್ ಎನ್ನುವ ಘೋಷಣೆಗಳನ್ನು ಕೂಗುತ್ತಿದ್ದರು. ಮೈಸೂರು ಹುಲಿ ಟಿಪ್ಪುಸುಲ್ತಾನ್, ಚಾಂದ್ ಚಿತ್ರವಿರುವ ಭಾವುಟಗಳು ಮೆರವಣಿಗೆಯಲ್ಲಿ ರಾರಾಜಿಸಿದವು.

ಜಟಕಾಬಂಡಿ, ಎತ್ತಿನಗಾಡಿಗಳನ್ನು ಹೂವು ಹಾರಗಳಿಂದ ಅಲಂಕರಿಸಿ ಚಾಂದಿನಿಯನ್ನು ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು. ನೂರಾರು ದ್ವಿಚಕ್ರ ವಾಹನಗಳಲ್ಲಿ ಕುಳಿತು ಭಾವುಟಗಳನ್ನು ಹಿಡಿದು ನಗರದೆಲ್ಲೆಡೆ ಸಂಚರಿಸಿ ಈದ್‌ಮಿಲಾದ್ ಹಬ್ಬದ ಸಂಭ್ರಮದಲ್ಲಿ ಯುವಕರು ಮಿಂದೆದ್ದರು. ಕುದುರೆ ಹಾಗೂ ಎತ್ತುಗಳನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಮೆರವಣಿಗೆಯಲ್ಲಿದ್ದವರೆಲ್ಲಾ ತಲೆಯ ಮೇಲೆ ಬಿಳಿ ಟೋಪಿಗಳನ್ನು ಧರಿಸಿದ್ದರೆ ಇನ್ನು ಕೆಲವರು ಬಿಸಿಳ ಝಳಕ್ಕೆ ಬಣ್ಣದ ಬಣ್ಣದ ಪೇಟಗಳನ್ನು ಸುತ್ತಿಕೊಂಡು ಮೆರವಣಿಗೆಯಲ್ಲಿ ಹೊರಟರು.

ಗಾಂಧಿವೃತ್ತ, ಹೊರಪೇಟೆ, ಉಮರ್ ಸರ್ಕಲ್, ಆಜಾದ್ ನಗರ, ಹಿಮ್ಮತ್‌ನಗರ ಸೇರಿದಂತೆ ಅನೇಕ ಕಡೆ ಹಸಿರು ಹಾಗೂ ಬಿಳಿ ಬಟ್ಟೆಗಳನ್ನು ಸುತ್ತಿ ಅಲಂಕರಿಸಲಾಗಿತ್ತು. ರಸ್ತೆ ಮಧ್ಯದಲ್ಲಿರುವ ಡಿವೈಡರ್‌ಗಳಿಗೆ ಸೀರಿಯಲ್ ಲೈಟ್‌ಗಳನ್ನು ಅಳವಡಿಸಲಾಗಿತ್ತು. ಹಬ್ಬದ ಶುಭಾಷಯಗಳನ್ನು ಕೋರುವ ಗಣ್ಯರ ಫ್ಲೆಕ್ಸ್, ಬ್ಯಾನರ್, ಕಟೌಟ್‌ಗಳು ಅಲ್ಲಲ್ಲಿ ರಾರಾಜಿಸುತ್ತಿದ್ದವು.



ಪುಟ 2

## ಇನ್ಫೆಂಟ್ ಜೀಸಸ್ ಶಾಲೆಯ ವಿದ್ಯಾರ್ಥಿನಿ ಹರ್ಡಲ್ಸ್ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



**ಚಳ್ಳಕೆರೆ:** ಇತ್ತೀಚೆಗೆ ಚಿತ್ರದುರ್ಗದಲ್ಲಿ ಮುಕ್ತಾಯವಾದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಕ್ರೀಡಾಕೂಟದಲ್ಲಿ ಇನ್‌ಫೆಂಟ್ ಜೀಸಸ್ ಶಾಲೆಯ 7ನೇ ತರಗತಿ ವಿದ್ಯಾರ್ಥಿನಿ ಹರಿಪ್ರಿಯ 80 ಮೀಟರ್ಸ್ ಹರ್ಡಲ್ಸ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸಿರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. 6ನೇ ತರಗತಿ ಆರ್.ನೂತನ ತೃತೀತ ಸ್ಥಾನ ಪಡೆದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಶಾಲೆಯ ಮುಖ್ಯಸ್ಥ ರಿಚರ್ಡ್ ಅನಿಲ್ ಡಿಸೋಜಾ ಶಾಲೆಯ ದೈಹಿಕ ಶಿಕ್ಷಕ ವಿಲ್ಸನ್ ಫರ್ನಾಂಡಿಸ್ ಸೇರಿದಂತೆ ಎಲ್ಲಾ ಶಿಕ್ಷಕರೂ ಸಹ ವಿದ್ಯಾರ್ಥಿಗಳಿಗೆ ಕ್ರೀಡೆಯ ಬಗ್ಗೆ ಉಪಯುಕ್ತ ಮಾಹಿತಿ ಹಾಗೂ ತರಬೇತಿ ನೀಡಿದ್ದರು. ಇಬ್ಬರೂ ವಿದ್ಯಾರ್ಥಿಗಳು ಗೆಲುವು ಸಾಧಿಸಿದ್ದು ಶಾಲೆಯ ಆಡಳಿತ ಮಂಡಳಿ ಪರವಾಗಿ ಅವರನ್ನು ಅಭಿನಂದಿಸಲಾಗುವುದು ಎಂದರು.

**ಪ್ರಮುಖ ಸುದ್ದಿ**

# ಮುಸ್ಲಿಂ ಬಾಂಧವರಿಂದ ಸಡಗರದ ಈದ್ ಮಿಲಾದ್

» **ಮೊಳಕಾಲ್ಮುರು**

ಪವಿತ್ರ ಇಸ್ಲಾಮಿಕ್ ಹಬ್ಬವಾದ ಈದ್ ಮಿಲಾದ್ ಹಬ್ಬವನ್ನು ಪ್ರಪಂಚದಾದ್ಯಂತದ ಮುಸ್ಲಿಮ ಬಾಂಧವರು ತಮ್ಮ ಕುಟುಂಬ ಮತ್ತು ಸ್ನೇಹಿತರೊಂದಿಗೆ ಸಡಗರ ಸಂಭ್ರಮ ದಿಂದ ಆಚರಣೆ ಮಾಡುತ್ತಿದು ಪ್ರವಾದಿ ಮೊಹಮ್ಮದರ ಜನ್ಮದಿನವನ್ನು ಈದ್ ಮಿಲಾದ್ ಹಬ್ಬವಾಗಿ ಮುಸ್ಲಿಮ ಬಾಂಧವರು ಆಚರಿಸುತ್ತಾರೆ. ಸೆಪ್ಟೆಂಬರ್ 16 ರಿಂದ ಶುರುವಾದ ಆಚರಣೆ ಸೆಪ್ಟೆಂಬರ್ 27 ಮತ್ತು 28ರಂದು ಅಂತ್ಯಗೊಳ್ಳುತ್ತದೆ. ಈ ದಿನವನ್ನು ಮಾವ್ಲಿದ್ ಮತ್ತು ನಬಿದ್ ಎಂದೂ ಕರೆಯಲಾಗುತ್ತದೆ. ಈದ್–ಎ– ಮಿಲಾದ್ ಮುಸ್ಲಿಂ ಸಮುದಾಯದ ಜನರಲ್ಲಿ ಹೆಚ್ಚಿನ ಧಾರ್ಮಿಕ ಮಹತ್ವವನ್ನು ಹೊಂದಿದೆ. ಈ ದಿನವನ್ನು ಪ್ರಪಂಚದಾದ್ಯಂತದ ಎಲ್ಲಾ ಮುಸ್ಲಿಮರು ಬಹಳ ಉತ್ಸಾಹ ಮತ್ತು ಸಂತೋಷದಿಂದ ಆಚರಿಸುತ್ತಾರೆ. ಈ ದಿನವು ಪ್ರವಾದಿ ಮೊಹಮ್ಮದ್ ಅವರ ಜನ್ಮದಿನವನ್ನು ಸೂಚಿಸುತ್ತದೆ. ಈ ದಿನವು ಪವಿತ್ರ ಪ್ರವಾದಿಯ ದಯೆ, ಸಹಾನುಭೂತಿ ಮತ್ತು ಬೋಧನೆಗಳನ್ನು ನೆನಪಿಸುವುದರಿಂದ ಈ ದಿನವನ್ನು ಅತ್ಯಂತ ಶುಭ ದಿನವೆಂದು ಪರಿಗಣಿಸಲಾಗಿದೆ.



ಮುಸ್ಲಿಂ ಬಾಂದವರು ಹಬ್ಬಕ್ಕೆ ಒಂದು ದಿನ ಮುಂಚಿತವಾಗಿ ತಯಾರಿಯನ್ನು ಪ್ರಾರಂಭಿಸುತ್ತಾರೆ. ತಮ್ಮ ಸುತ್ತಮುತ್ತಲಿನ ಪ್ರದೇಶಗಳನ್ನು ಸುಂದರ ವರ್ಣರಂಜಿತ ದೀಪಗಳು ಮತ್ತು ಧ್ವಜಗಳಿಂದ ಅಲಂಕರಿಸುತ್ತಾರೆ. ಅಲ್ಲದೆ ಈ ದಿನವನ್ನು ಬಹಳ ಸಂಭ್ರಮದಿಂದ ಆಚರಿಸುತ್ತಾರೆ, ಹಸಿರು ಬಣ್ಣವು ಇಸ್ಲಾಂ ಅನ್ನು ಸೂಚಿಸುವುದರಿಂದ ಅವರು ತಮ್ಮ ಕೈಯಲ್ಲಿ ಹಸಿರು ಬ್ಯಾಂಡ್ಗಳನ್ನು ಕಟ್ಟುತ್ತಾರೆ. ಹೊಸ ಬಟ್ಟೆಗಳನ್ನು ಧರಿಸುವುದು, ಸಿಹಿ ತಿಂಡಿಗಳನ್ನು ವಿತರಿಸುವುದು ಮತ್ತು ಮಸೀದಿಗೆ ಭೇಟಿ ನೀಡುವುದು ಈ ದಿನದ ಪ್ರಮುಖ ಆಚರಣೆಗಳಲ್ಲಿ ಒಂದಾಗಿದೆ. ಮುಸ್ಲಿಂ ಸಮುದಾಯದ ಜನರು ಈ ದಿನ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸುತ್ತಾರೆ ಮತ್ತು ಅಲ್ಲಾಹನ ಆಶೀರ್ವಾದವನ್ನು ಪಡೆಯುತ್ತಾರೆ.

ಮುಸ್ಲಿಂ ಮಹಿಳೆಯರು ಶೀರ್ ಖುರ್ಮಾ ಮತ್ತು ಸೇವಾಯನ್ ನಂತಹ ವಿವಿಧ ರೀತಿಯ ಭಕ್ಷ್ಯಗಳನ್ನು ತಯಾರಿಸುತ್ತಾರೆ. ಜೊತೆಗೆ ತಮ್ಮ ಸಂಬಂಧಿಕರನ್ನು ಮನೆಗೆ ಆಹ್ವಾನಿಸಿ ಅವರೊಂದಿಗೆ ಈ ದಿನವನ್ನು ಸಂಭ್ರಮ ಸಂತೋಷದಿಂದ ಆಚರಿಸುತ್ತಾರೆ.

ನಾಗಸಮುದ್ರ ಗ್ರಾಮದ ಮುಸ್ಲಿಂ ಬಾಂಧವರು ಈದ್ ಮಿಲಾದ್ ಹಬ್ಬವನ್ನು ಅದ್ದೂರಿಯಾಗಿ ಆಚರಣೆ ಮಾಡಿ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.

ಸಂದರ್ಭದಲ್ಲಿ ಮುಸ್ಲಿಂ ಬಾಂಧವರಾದ ಅನ್ವರ್ ಭಾಷಾ ನಸೀರ್ ಸಾಬ್ , ಅಸ್ಲಾಂ ಭಾಷಾ, ಅಬ್ದುಲ್ ವಾಹಿದ್ಸಾಬ್, ಗುಲಾಮ್ ಮೊಹಮ್ಮದ್, ಹರುನ್ ರಶೀದ್, ಮಹಮ್ಮದ್ ಈಲಿಯಾಸ್, ಫಾರೂಕ್, ಗ್ರಾಮ ಪಂಚಾಯತಿ ಸದಸ್ಯರಾದ ಶಬ್ಬೀರ್ ಇ.ಭಾಷಾ, ಸದ್ದಾಮ್ ಹುಸೇನ್, ಸುಹೇಬ್ ತಬ್ರೇಜ್ ಏಜಸ್ ಫಯಾಜ್, ಎಮ್ ಖಲೀಲ್, ಮಸೀದಿಯ ಸೆಕ್ರೆಟರಿ ಜಬಿ ಉಲ್ಲಾ, ಮುತ್ತುವಲ್ಲಿ, ಟಿ .ಶಬೀರ್ಹಾಗೂ ಮುಸ್ಲಿಂ ಮುಖಂಡರು ಭಾಗವಹಿಸಿ ಪ್ರಾರ್ಥನೆ ಸಲ್ಲಿಸಿದರು.

## ಫಾಸ್ಟ್ ನ್ಯೂಸ್

### ಅಕ್ರಮ ಮರಳು ಸಾಗಾಟ: ಟ್ರ್ಯಾಕ್ಟರ್ ಸಹಿತ ಚಾಲಕನ ಬಂಧನ.

**ಚಳ್ಳಕೆರೆ:** ತಾಲ್ಲೂಕಿನ ಬಾಲೇನಹಳ್ಳಿ ಗ್ರಾಮದ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಮರಳು ತುಂಬಿ ಸಾಗಾಟ ಮಾಡುತ್ತಿದ್ದ ಅದೇ ಗ್ರಾಮದ ಶಿವಣ್ಣ(28) ಎಂಬ ವ್ಯಕ್ತಿ ಹಾಗೂ ಟ್ರ್ಯಾಕ್ಟರನ್ನು ವಶಪಡಿಸಿಕೊಂಡು ಪ್ರಕರಣ ದಾಖಲು ಮಾಡಲಾಗಿದೆ ಎಂದು ಪಿಎಸ್‌ಐ ಕೆ.ಸತೀಶ್‌ನಾಯ್ಕ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಖಚಿತ ವರ್ತಮಾನದ ಮೇರೆಗೆ ಸಿಬ್ಬಂದಿಯೊಂದಿಗೆ ಬಾಲೇನಹಳ್ಳಿ ಗ್ರಾಮದ ಸರ್ಕಾರಿ ಗೋಮಾಳಕ್ಕೆ ತೆರಳಿದಾಗ ಅಲ್ಲಿ ಟ್ರ್ಯಾಕ್ಟರ್‌ಗೆ ಮರಳು ತುಂಬಿ ಸಾಗಾಟ ಮಾಡುತ್ತಿದ್ದು, ಕೂಡಲೇ ತಡೆದು ಟ್ರ್ಯಾಕ್ಟರ್ ಚಾಲಕ ಶಿವಣ್ಣನನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

### ನಗರದಲ್ಲಿ ಸಂಭ್ರಮದ ಈದ್‌ಮಿಲಾದ್

**ಮೊದಲ ಪುಟದಿಂದ:** ಮೆರವಣಿಗೆ ನಡುವೆಯೇ ಗಾಂಧಿವೃತ್ತದ ಕಡೆಯಿಂದ ಸೈರನ್ ಹಾಕಿಕೊಂಡು ಬಂದ ಅಂಬ್ಯುಲೆನ್ಸ್‌ಗೆ ದಾರಿ ಮಾಡಿಕೊಟ್ಟ ಮುಸಲ್ಮಾನರು ಮಾನವೀಯತೆ ಮೆರೆದರು. ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಡಾ.ಟಿಪ್ಪುಖಾಸಿಂ ಆಲಿ, ಹೆಚ್.ಶಬ್ಬೀರ್‌ಭಾಷ, ಜಿಲ್ಲಾ ವಕ್ಫ್ ಮಂಡಳಿ ಅಧ್ಯಕ್ಷ ಇಕ್ಬಾಲ್ ಹುಸೇನ್(ಎಂ.ಸಿ.ಓ.ಬಾಬು) ಉಪಾಧ್ಯಕ್ಷ ನಯಾಜ್‌ಭಾಷ, ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಅಬ್ದುಲ್ಲಾ, ನಗರಸಭೆ ಮಾಜಿ ಉಪಾಧ್ಯಕ್ಷ ಸೈಯದ್ ಅಲ್ಲಾಭಕ್ಷಿ, ಶಿಕ್ಷಣ ಇಲಾಖೆಯ ನಿವೃತ್ತ ನೌಕರ ಸೈಯದ್ ಅಫಾಖ್ ಅಹಮದ್, ಸೈಯದ್ ಖುದ್ದೂಸ್, ಚೋಟು, ಮುತುವಲ್ಲಿಗಳು, ಖಾಜಿಗಳು, ಮದರಸಾದ ಮಕ್ಕಳು ಸಾವಿರಾರು ಸಂಖ್ಯೆಯಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಪುಟ್ಟ ಪುಟ್ಟ ಮಕ್ಕಳು ವಯಸ್ಸಾದವರು ಗಾಡಿಗಳಲ್ಲಿ ಕುಳಿತು ಮೆರವಣಿಗೆಲ್ಲಿ ಸಾಗಿದರು. ಗಾಂಧಿ ವೃತ್ತ ಸೇರಿದಂತೆ ಅಲ್ಲಲ್ಲಿ ಬಿಗಿ ಪೊಲೀಸ್ ಭದ್ರತೆಯನ್ನು ಒದಗಿಸಲಾಗಿತ್ತು.

### ಈದ್‌ಮಿಲಾದ್ ಅಂಗವಾಗಿ ಜಿಲ್ಲಾಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ವಿತರಣೆ



**ಚಿತ್ರದುರ್ಗ:** ಮನುಕುಲಕ್ಕೆ ಶಾಂತಿಯ ಸಂದೇಶ ಸಾರಿರುವ ಪ್ರವಾದಿ ಮಹಮದ್ ಪೈಗಂಬರ್‌ರವರ ಜನ್ಮ ದಿನದ ಅಂಗವಾಗಿ ಗುರುವಾರ ಆಚರಿಸಲಾದ ಈದ್‌ಮಿಲಾದ್ ಹಬ್ಬದಂದು ಆರ್.ಎಂ.ಡಿ.ಆಯಿಲ್ ಇಂಡಸ್ಟ್ರಿಸ್ ಮಾಲೀಕರಾದ ಹಾಜಿ ಆರ್.ದಾದಾಪೀರ್ ಜಿಲ್ಲಾಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣುಗಳನ್ನು ವಿತರಿಸಿ ಶೀಘ್ರವೇ ಗುಣಮುಖರಾಗುವಂತೆ ಹಾರೈಸಿದರು.

ಡಾ.ರಹಮತ್‌ವುಲ್ಲಾ, ಜುಬೇರ್ ಅನ್ಸಾರಿ, ಅಕ್ಬರ್, ಅಫೀಜ್‌ರೆಹಮಾನ್, ಇರ್ಫಾನ್, ನ್ಯಾಯವಾದಿ ಸಿರಾಜ್, ಪ್ರಭಾರೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ದೇವರಾಜ್, ನಿವಾಸಿ ವೈದ್ಯಾಧಿಕಾರಿ ಡಾ.ಆನಂದಪ್ರಕಾಶ್ ಈ ಸಂದರ್ಭದಲ್ಲಿದ್ದರು.

### ಅ.1 ಕ್ಕೆ ರಾಜ್ಯ ಮಟ್ಟದ ನೌಕರರ ಮಹಾಸಭೆ: ಗಂಗಾಧರಪ್ಪ ಮಾಹಿತಿ

**ಹೊಸದುರ್ಗ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು ಇದರ 2022ರ ಉಪವಿಧಿಗಳನ್ನು ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಅಕ್ಟೋಬರ್ 1.ರ ಬೆಳಿಗ್ಗೆ 11ಕ್ಕೆ ಸರ್ವ ಸದಸ್ಯರ ವಿಶೇಷ ಮಹಾಸಭೆಯನ್ನು ವರ್ಚುಯಲ್ ವಿಧಾನದ ಮೂಲಕ ಕರೆಯಲಾಗಿದೆ. ಸಂಘದ ಸರ್ವ ಸದಸ್ಯರು ಭಾಗವಹಿಸಿ, ಸಭೆಯನ್ನು ಯಶಸ್ವಿಗೊಳಿಸಬೇಕೆಂದು ರಾಜ್ಯ ಸರ್ಕಾರಿ ನೌಕರರ ಸಂಘದ ಹೊಸದುರ್ಗ ತಾಲೂಕು ಘಟಕದ ಅಧ್ಯಕ್ಷ ಆರ್.ಗಂಗಾಧರಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸರ್ವ ಸದಸ್ಯರ ವಿಶೇಷ ಮಹಾಸಭಾ ಮಹಾವೀರ ಸಮುದಾಯ ಭವನ, ಹಿರೇ ಸಿಂದೋಗಿ ರಸ್ತೆ, ಗೋಶಾಲೆ ಹತ್ತಿರ, ಕೊಪ್ಪಳ ನಗರ, ಕೊಪ್ಪಳ ಜಿಲ್ಲೆ ಇಲ್ಲಿ ಸಂಘದ ರಾಜ್ಯಾಧ್ಯಕ್ಷ ಷಡಕ್ಷರಿ ರವರ ಅಧ್ಯಕ್ಷತೆಯಲ್ಲಿ ಮಹಾಸಭೆ ಆಯೋಜಿಸಲಾಗಿದ್ದು, ಸಂಘದ ಸರ್ವ ಸದಸ್ಯರು ಈ ವಿಶೇಷ ಮಹಾಸಭೆಯಲ್ಲಿ ಭಾಗವಹಿಸುವ ಮೂಲಕ ಸಭೆಯನ್ನು ಯಶಸ್ವಿಗೊಳಿಸಲು ಕೋರಿದೆ.

### ಮಹಿಳೆ ಕಾಣೆ

**ದಾವಣಗೆರೆ:** ಮಾಯಕೊಂಡ ಪೊಲೀಸ್ ಠಾಣೆಯ ವ್ಯಾಪ್ತಿಯ ಬಾಡ ಗ್ರಾಮದ ಲಲಿತಮ್ಮ ಕೋಂ ರೇವಣಸಿದ್ದಪ್ಪ 50 ವರ್ಷ, ಗಂಗಾಮತ ಜನಾಂಗದವರು ಇವರು ಕಳೆದ 10, ಅಕ್ಟೋಬರ್ 2010 ರಂದು ಮನೆಯಿಂದ ಹೋದವರು ವಾಪಾಸ್ ಮನೆಗೆ ಬಾರದೇ ಕಾಣೆಯಾಗಿರುತ್ತಾರೆ.

# ಜಿಲ್ಲೆಯಲ್ಲಿ ಪ್ರವಾಸೋದ್ಯಮ ವಿಫುಲ ಅವಕಾಶ

» **ದಾವಣಗೆರೆ**

ಜಿಲ್ಲೆಯಲ್ಲಿ ವಿವಿಧ ಪ್ರವಾಸಿ ತಾಣಗಳು ಪ್ರವಾಸಿಗರ ಕಣ್ಮನ ಸೆಳೆಯುತ್ತಿದ್ದು ಇಲ್ಲಿ ಇನ್ನೂ ಹೆಚ್ಚಿನ ಪ್ರವಾಸೋದ್ಯಮ ಚಟುವಟಿಕೆ ಕೈಗೊಳ್ಳಲು ವಿಫುಲ ಅವಕಾಶಗಳಿವೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಇವರ ಸಹಯೋಗದೊಂದಿಗೆ ನಗರದ ಎಸ್.ಎಸ್.ಕನ್ವೆಂಷನ್ ಸೆಂಟರ್‌ನ ಪಾರ್ವತಿ ಪರ್ಲ್ ಮಿನಿ ಹಾಲ್‌ನಲ್ಲಿ ಪ್ರವಾಸೋದ್ಯಮ ಮತ್ತು ಹಸಿರು ಹೂಡಿಕೆ ಎಂಬ ಸಂದೇಶದೊಂದಿಗೆ ಜರುಗಿದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲೆಯ ಪ್ರವಾಸಿ ತಾಣಗಳ ವೀಡಿಯೋ ಚಿತ್ರೀಕರಣಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯು ಮಧ್ಯ ಕರ್ನಾಟಕದಲ್ಲಿದ್ದು, ರಾಷ್ಟ್ರೀಯ ಹೆದ್ದಾರಿ ಸೇರಿದಂತೆ ರೈಲ್ವೇ ಮಾರ್ಗವನ್ನೂ ಒಳಗೊಂಡಿದೆ. ಆದ್ದರಿಂದ ಪ್ರವಾಸೋದ್ಯಮ ಚಟುವಟಿಕೆಗಳನ್ನು ಹೆಚ್ಚು ಪ್ರೋತ್ಸಾಹಿಸಲು ಸಾಕಷ್ಟು ಅವಕಾಶಗಳಿವೆ. 1980 ರಿಂದ ವಿಶ್ವ ಪ್ರವಾಸೋದ್ಯಮ ದಿನಾಚರಣೆಯನ್ನು ವಿಶ್ವದಾದ್ಯಂತ ವಿಶಿಷ್ಟವಾಗಿ ಆಚರಿಸುತ್ತಾ ಬರಲಾಗಿದೆ. ಇದರ ಮುಖ್ಯ ಉದ್ದೇಶ ಸಾಂಸ್ಕೃತಿಕ, ವ್ಯಾಪಾರ, ಭಾಷೆ ದೃಷ್ಟಿಯಿಂದ ಜನರನ್ನು ಆಕರ್ಷಣೆಗೆ ಒಳಗಾಗುವಂತೆ ಮಾಡುವುದಾಗಿದೆ.



ಪ್ರವಾಸಿ ತಾಣವೆಂದರೆ ಪ್ರವಾಸಿಗರಿಗೆ ಒಂದು ಹೊಸ ಅನುಭವ, ಆಕರ್ಷಣೆ ಹಾಗೂ ಶುಚಿತ್ವ ಹೊಂದಿದಾಗ ಮಾತ್ರ ಪ್ರವಾಸೋದ್ಯಮ ಕ್ಷೇತ್ರವು ಮುಂದುವರೆಯಲು ಸಾಧ್ಯ. ಇಡೀ ವಿಶ್ವದಲ್ಲೇ ಸ್ವಿಡ್ಜರ್‌ಲ್ಯಾಂಡ್, ಯುರೋಪಿಯನ್ ದೇಶಗಳಂತೆಯೇ ನಮ್ಮ ದೇಶದ ಗೋವಾ, ಕೇರಳ ರಾಜ್ಯಗಳು ತನ್ನ ಸಂಪೂರ್ಣ ಜಿ.ಡಿ.ಪಿ ಯನ್ನು ಶೇ.90 ರಷ್ಟು ಆದಾಯವನ್ನು ಪ್ರವಾಸೋದ್ಯಮದಿಂದಲೇ ಪಡೆಯುತ್ತಿವೆ. ಈ ನಿಟ್ಟಿನಲ್ಲಿ ಜಿಲ್ಲೆಯ ಹೂಡಿಕೆದಾರರು ಹೋಟೆಲ್, ರೆಸಾರ್ಟ್‌ಗಳನ್ನು ಸ್ಥಾಪಿಸುವ ಮೂಲಕ ಸಾವಿರಾರು ಜನರಿಗೆ ಉದ್ಯೋಗ ನೀಡಬಹುದು ಹಾಗೂ ತಮ್ಮ ವೈಯಕ್ತಿಕ ಆದಾಯ ಮತ್ತು ಜಿಲ್ಲೆಯ ಜಿ.ಡಿ.ಪಿ ಪ್ರಮಾಣವನ್ನೂ ಹೆಚ್ಚಿಸಬಹುದು. ಜಿಲ್ಲೆಯಲ್ಲಿ ಕದಂಬ, ಹೊಯ್ಸಳ ಹಾಗೂ ಚಾಲುಕ್ಯರ ಶೈಲಿಯ ಶಿಲ್ಪಕಲೆಗಳು ಪ್ರವಾಸಿಗರನ್ನು ಕೈಬೀಸಿ ಕರೆಯುವಂತಿವೆ ಎಂದರು.

ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಮಧು ಎಲ್.ಪಿ, ಪ್ರವಾಸೋದ್ಯಮ ಇಲಾಖೆಯ ಜಿಲ್ಲಾ ಸಮಾಲೋಚಕ ಜಹೀರ್ ಖಾನ್ ಹಾಗೂ ಹೋಟೆಲ್ ಉದ್ದಿಮೆದಾರರು ಉಪಸ್ಥಿತರಿದ್ದರು.

# ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ

## ಉತ್ತಮ ವ್ಯಕ್ತಿತ್ವ ರೂಪುಗೊಳ್ಳಲು ಎನ್‌ಎಸ್‌ಎಸ್ ಸಹಕಾರಿ: ತಿಪ್ಪೇರುದ್ರಸ್ವಾಮಿ

» **ಚಿತ್ರದುರ್ಗ**

ವಿದ್ಯಾರ್ಥಿಗಳಲ್ಲಿ ಉತ್ತಮ ವ್ಯಕ್ತಿತ್ವ ರೂಪುಗೊಳ್ಳಲು ಎನ್‌ಎಸ್‌ಎಸ್ ಸಹಕಾರಿ ಎಂದು ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಟಿ. ತಿಪ್ಪೇರುದ್ರಸ್ವಾಮಿ ಹೇಳಿದರು.

ನಗರದ ಸರ್ಕಾರಿ ಕಲಾ ಕಾಲೇಜಿನ ಅಂಬೇಡ್ಕರ್ ಜ್ಞಾನ ಸಭಾಂಗಣದಲ್ಲಿ ಮಂಗಳವಾರ ರಾಷ್ಟ್ರೀಯ ಸೇವಾ ಯೋಜನೆ-1 ಮತ್ತು 2ರ ವತಿಯಿಂದ ಆಯೋಜಿಸಿದ್ದ ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ರಾಷ್ಟ್ರೀಯ ಸೇವಾ ಯೋಜನೆ ಸಮೃದ್ಧ ರಾಷ್ಟ್ರ ನಿರ್ಮಾಣದ ಜೊತೆಗೆ ವಿದ್ಯಾರ್ಥಿಗಳಲ್ಲಿ ಉತ್ತಮ ವ್ಯಕ್ತಿತ್ವ ರೂಪಿಸುತ್ತದೆ ಎಂದು ತಿಳಿಸಿದ ಅವರು, ರಾಷ್ಟ್ರೀಯ ಸೇವಾ ಯೋಜನೆಯ ಇತಿಹಾಸ ಮತ್ತು ಅದರ ಪ್ರಸ್ತುತತೆ ಬಗ್ಗೆ ತಿಳಿಸಿದರು.

ಸಂಜೀವನಿ ಜೀವ ರಕ್ಷಕ ಟ್ರಸ್ಟ್ ಅಧ್ಯಕ್ಷೆ ಡಾ. ಸೌಮ್ಯ ಮಂಜುನಾಥ್ ಮಾತನಾಡಿ, ಮಹಾತ್ಮ ಗಾಂಧಿಯವರ ಜನ್ಮ ಶತಮಾನೋತ್ಸವದ ಸ್ಮರಣೆಗಾಗಿ ಸ್ಥಾಪಿಸಲ್ಪಟ್ಟ ರಾಷ್ಟ್ರೀಯ ಸೇವಾ ಯೋಜನೆಯ ಸದೃಢ ಸಮಾಜ ನಿರ್ಮಾಣದಲ್ಲಿ ಅಪೂರ್ವ ಕೊಡುಗೆ ನೀಡುತ್ತದೆ. ಪ್ರಸುತ್ತ ಸನ್ನಿವೇಶದಲ್ಲಿ ಎನ್‌ಎಸ್‌ಎಸ್ ಶಿಬಿರಗಳ ಆಯೋಜನೆಯಿಂದ ನೈರ್ಮಲ್ಯ ಭಾತೃತ್ವ, ವ್ಯಕ್ತಿತ್ವ ವಿಕಸನ ಮುಂತಾದ ಪ್ರಯೋಜನಗಳು ಲಭಿಸುತ್ತವೆ ಎಂದರು.



ಕಾಲೇಜು ಪ್ರಾಧ್ಯಾಪಕರ ಸಂಘದ ಕಾರ್ಯದರ್ಶಿ ಪ್ರೊ.ಎಲ್. ನಾಗರಾಜಪ್ಪ ಮಾತನಾಡಿ, ವಿದ್ಯಾರ್ಥಿಗಳ ಜೀವನದಲ್ಲಿ ಇಂತಹ ಚಟುವಟಿಕೆಗಳನ್ನು ಕೈಗೊಳ್ಳುವುದರಿಂದ ವಿದ್ಯಾರ್ಥಿಗಳಲ್ಲಿ ಹೊಂದಾಣಿಕೆ ಮನೋಭಾವ, ಜ್ಞಾನ, ನಾಯಕತ್ವ ಗುಣ ಮುಂತಾದವು ಮೂಡುತ್ತವೆ ಎಂದು ಅಭಿಪ್ರಾಯಪಟ್ಟರು.

ವೇದಿಕೆ ಕಾರ್ಯಕ್ರಮ ಮುನ್ನ ಕಾಲೇಜಿನ ಮುಂಭಾಗದಲ್ಲಿ ಧ್ವಜಾರೋಹಣ ನೆರವೇರಿತು. ರಾಮೇಶ್ವರ್ ಮತ್ತು ಪವನ್ ಅವರ ಆಕರ್ಷಕ ಕವಾಯತು ನೆರೆದಿದ್ದವರ ಮನಸೆಳೆಯಿತು.

ಕಾರ್ಯಕ್ರಮದಲ್ಲಿ ಪತ್ರಾಂಕಿತ ವ್ಯವಸ್ಥಾಪಕ ಮಾರ್ಟಿನ್ ಸ್ಯಾಮುಲ್, ಎನ್‌ಎಸ್‌ಎಸ್ ಘಟಕಗಳ ಅಧಿಕಾರಿಗಳಾದ ಡಾ.ವಿ. ಪ್ರಸಾದ್ ಮತ್ತು ಪ್ರೋ.ಬಿ.ಕೆ.ಬಸವರಾಜು, ಪ್ರೋ. ಮಹಬೂಬ್ ಭಾಷಾ, ಡಾ. ನಾಗವರ್ಮ, ಪ್ರೋ.ನಯಾಜ್ ಅಹ್ಮದ್, ಪ್ರೋ. ರಹಮತ್, ಪ್ರೋ. ಮಂಜುನಾಥ, ಸ್ವಯಂ ಸೇವಕಿ ಪವಿತ್ರ, ಕವನ, ಅಭಿಷೇಕ್, ರಮೇಶ, ರಕ್ಷಿತ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಸರ್ಕಾರದ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು



» **ದಾವಣಗೆರೆ**

ಸರ್ಕಾರದ ಎಲ್ಲಾ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು, ಎಲ್ಲಾ ಜನಾಂಗದವರಿಗೂ ಈ ಯೋಜನೆಯ ಲಾಭಸಿಕ್ಕಗ ಸಮಾಜದ ಅಭಿವೃದ್ಧಿಯಾಗುತ್ತದೆ ಈ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಹೇಳಿದರು. ಬುಧವಾರ (27) ರಂದು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜರುಗಿದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಪ್ರಧಾನ ಮಂತ್ರಿಯವರ 15-ಅಂಶ ಕಾರ್ಯಕ್ರಮಗಳ ಪ್ರಸಕ್ತ ಸಾಲಿನ ಏಪ್ರಿಲ್-2023 ರಿಂದ ಆಗಸ್ಟ್-2023ರವರೆಗೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತಾನಾಡಿರು ಎಲ್ಲಾ ಇಲಾಖೆಯ ಅಧಿಕಾರಿಗಳು ಅಲ್ಪಸಂಖ್ಯಾತರ ವರ್ಗದವರಿಗೆ ಮೀಸಲಿರಿಸಿರುವ ಸೌಲಭ್ಯ, ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸಬೇಕು ಎಂದರು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ.ವಿ.ಮಠದ ಅವರು 15 ಅಂಶಗಳ ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು. ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ.ಎ.ಎಲ್, ಅಲ್ಪಸಂಖ್ಯಾತರ ನಾಮನಿರ್ದೇಶಿತ ಸದಸ್ಯರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಂದ್‌ಗೆ ಕರುನಾಡ ವಿಜಯಸೇನೆಯಿಂದ ಕರಪತ್ರ ಹಂಚಿ ಮನವಿ

» **ಚಿತ್ರದುರ್ಗ**

ಕಾವೇರಿ ಉಳಿವಿಗಾಗಿ ವಿವಿಧ ಸಂಘಟನೆಗಳು, ಜನಪರ ಹೋರಾಟಗಾರರು, ರೈತರು ಕರ್ನಾಟಕ ಬಂದ್‌ಗೆ ಕರೆ ನೀಡಿರುವುದಕ್ಕೆ ಬೆಂಬಲಿಸುವಂತೆ ಕರುನಾಡ ವಿಜಯಸೇನೆ ವತಿಯಿಂದ ಗಾಂಧಿವೃತ್ತದಲ್ಲಿ ಗುರುವಾರ ಕರಪತ್ರಗಳನ್ನು ವಿತರಿಸುವ ಮೂಲಕ ಮನವಿ ಮಾಡಲಾಯಿತು. ಗಾಂಧಿವೃತ್ತದಿಂದ ಹಿಡಿದು ಎಸ್.ಬಿ.ಎಂ. ಸರ್ಕಲ್‌ವರೆಗೆ ಪ್ರತಿ ಅಂಗಡಿ ಹಾಗೂ ಬೀದಿ ಬದಿ ವ್ಯಾಪಾರಿಗಳು, ಆಟೋರಿಕ್ಷಾದವರಿಗೆ ಕರಪತ್ರಗಳನ್ನು ವಿತರಿಸಿದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ತಮಿಳುನಾಡಿಗೆ ಕರ್ನಾಟಕದಿಂದ ಪ್ರತಿನಿತ್ಯ ಕಾವೇರಿ ನೀರು ಹರಿಸುತ್ತಿರುವುದರಿಂದ ರಾಜ್ಯ ಬರಗಾಲವನ್ನು ಎದುರಿಸುವಂತಾಗುತ್ತದೆ. ರೈತರ ಜೀವನಾಡಿ ಕಾವೇರಿಯಲ್ಲೇ ನೀರು



ಇಲ್ಲದಿರುವಾಗ ನಮ್ಮ ರಾಜ್ಯದ ಮುಖ್ಯಮಂತ್ರಿ ತಮಿಳು ನಾಡಿಗೆ ನೀರು ಹರಿಸುತ್ತಿರುವುದು ಯಾವ ನ್ಯಾಯ? ಹಾಗಾಗಿ ಸಮಸ್ತರು ಕರ್ನಾಟಕ ಬಂದ್‌ಗೆ ಬೆಂಬಲಿಸುವಂತೆ ವಿನಂತಿಸಿದರಲ್ಲದೆ ಮುಂಜಾಗ್ರತೆಯಾಗಿ ಶಾಲಾ-ಕಾಲೇಜುಗಳಿಗೆರಜೆ ಘೋಷಿಸಬೇಕು. ಇಲ್ಲವಾದಲ್ಲಿ ಮುಂದೆ ಆಗಬಹುದಾದ ಅನಾಹುತಗಳಿಗೆ ನಾವು ಜವಾಬ್ದಾರರಲ್ಲ ಎಂದು ಜಿಲ್ಲಾಡಳಿತವನ್ನು ಕೋರಿದರು.

# ಹೊಸದುರ್ಗ: ಸಂಭ್ರಮಿಸಿದ ಶ್ರೀ ಪ್ರಸನ್ನ ಗಣಪತಿ ಮೆರವಣಿಗೆ

» **ಹೊಸದುರ್ಗ**

ಇಡೀ ತಾಲ್ಲೂಕಿನಲ್ಲೆ ಐತಿಹಾಸಿಕ ಪ್ರಸಿದ್ದಿ ಪಡೆದಿರುವ ಪಟ್ಟಣದ ಶ್ರೀ ಗಣೇಶ ಸದನದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಶ್ರೀ ಪ್ರಸನ್ನ ಗಣಪತಿಯ 67 ನೇ ವರ್ಷದ ಶ್ರೀ ಗಣೇಶ ಮಹೋತ್ಸವ ಮೆರವಣಿಗೆಯುಪಟ್ಟಣದರಾಜ ಬೀದಿಗಳಲ್ಲಿ ಅತ್ಯಂತ ಸಡಗರ ಹಾಗೂ ಸಂಭ್ರಮಗಳಿಂದ ಅದ್ದೂರಿಯಿಂದ ಭವ್ಯ ರೀತಿಯಲ್ಲಿ ಜರುಗಿತು.



ಪಟ್ಟಣದ ಪ್ರಮುಖ ರಸ್ತೆ ಹಾಗೂ ಮುಖ್ಯ ಬಡಾವಣೆಯಲ್ಲಿ ಸೇರಿದ್ದ ಅಪಾರ ಭಕ್ತ ಸಮುದಾಯ ಪುಷ್ಪಲಂಕೃತ ಸಾರೋಟಿನಲ್ಲಿ ಸಾಗಿಬಂದಮೆರವಣಿಗೆಯನ್ನು ವೀಕ್ಷಿಸಿ ಗಜಾನನ ದರ್ಶನ ಪಡೆದರು.

**ಪ್ರಮುಖ ಸುದ್ದಿ**

# ಚಳ್ಳಕೆರೆ ಶಾಸಕರ ಭವನ ಎಲ್ಲರಿಗೂ ಆದರ್ಶ ಕೇಂದ್ರ

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರ ಶಾಸಕ ಭವನ ಕಾರ್ಯಾಲಯ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿಲ್ಲದೆ, ಸಾರ್ವಜನಿಕರ ಸಮಸ್ಯೆಗಳಿಗೂ ಸಕರಾತ್ಮಕವಾಗಿ ಸ್ಪಂದಿಸುವ ಮೂಲಕ ಆದರ್ಶ ಕೇಂದ್ರವಾಗಿದೆ ಎಂದು ಸಿರಿಗೆರೆ ತರಳಬಾಳು ಬೃಹ್ಮಠದ ಜಗದ್ಗುರು ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ತಿಳಿಸಿದರು.

ಅವರು, ಇಲ್ಲಿನ ಶಿಕ್ಷಣ ಇಲಾಖೆ ಕಾರ್ಯಕ್ರಮ ಆಗಮಿಸಿದ ಸಂದರ್ಭದಲ್ಲಿ ಶಾಸಕರ ಭವನಕ್ಕೆ ಭೇಟಿ ನೀಡಿ ಅಲ್ಲಿ ನಿರ್ಗಮನ ರಾಷ್ಟ್ರಪತಿಗಳು, ಪ್ರಧಾನಮಂತ್ರಿಗಳು, ಮುಖ್ಯಮಂತ್ರಿಗಳು, ಮಾಜಿ ಮುಖ್ಯಮಂತ್ರಿಗಳ ಭಾವಚಿತ್ರಗಳನ್ನು ವೀಕ್ಷಿಸಿದರಲ್ಲದೆ, ಪಕ್ಷಬೇದವಿಲ್ಲದೆ ಶಾಸಕ ಟಿ.ರಘುಮೂರ್ತಿಯವರು ಎಲ್ಲಾ ಪ್ರಭಾವಿ ಮುಖಂಡ ಭಾವಚಿತ್ರಗಳನ್ನು



ಶೇಖರಿಸಿದ್ದಾರೆ. ಅವರು ಮಾಡಿದ ಸಾಧನೆಯ ಬಗ್ಗೆಯೂ ಸಹ ಸಂಪೂರ್ಣ ಮಾಹಿತಿ ನೀಡಿದ್ದಾರೆ. ರಾಜ್ಯದ ಬೇರೆ ಯಾವುದೇ ವಿಧಾನಸಭಾ ಕ್ಷೇತ್ರದಲ್ಲೂ ಸಹ ಇಂತಹ ದೃಶ್ಯವನ್ನು ಕಾಣಲು ಸಾಧ್ಯವಿಲ್ಲ. ಪ್ರತಿಯೊಬ್ಬ ವ್ಯಕ್ತಿಯೂ ಪ್ರಸ್ತುತ ಸಮಾಜದಲ್ಲಿ ಯಾವ ರೀತಿ ಬದಲಾವಣೆಯಾಗುತ್ತಿದೆ ಎಂಬ ಬಗ್ಗೆ ಇಲ್ಲಿಗೆ ಬಂದು ತಿಳಿಯಬಹುದು. ರಾಷ್ಟ್ರಕ್ಕಾಗಿ ಸೇವೆ ಸಲ್ಲಿಸಿದ ಮಹಾನ್ ವ್ಯಕ್ತಿಗಳ ಚಿತ್ರವನ್ನು ಸಹ ನಾವು ಇಲ್ಲಿ ಕಾಣಬಹುದು. ಇದೊಂದು ಅಪರೂಪದ ಕಾರ್ಯಾಲಯವಾಗಿದೆ ಎಂದರು.

ಶಿಕ್ಷಣ ಸಚಿವ ಮಧುಬಂಗಾರಪ್ಪ ಸಹ ಕಾರ್ಯಾಲಯಕ್ಕೆ ಭೇಟಿ ನೀಡಿ ಮಾತನಾಡಿ, ಶಾಸಕ ಭವನದಲ್ಲಿ ಶಾಸಕರು ವಿಶೇಷ ಗಮನಹರಿಸಿ ಹಲವಾರು ಸುಧಾರಣೆಯ ಕ್ರಮಗಳನ್ನು ಕೈಗೊಂಡಿದ್ದಾರೆ. ಪ್ರತಿಯೊಬ್ಬ ವ್ಯಕ್ತಿಗೂ ಸರ್ಕಾರಿ ಯೋಜನೆಗಳ ಬಗ್ಗೆ ಇಲ್ಲಿ ಮಾರ್ಗದರ್ಶನ ನೀಡಲಾಗುತ್ತಿದೆ. ಸಮಸ್ಯೆಗಳನ್ನು ಹೊತ್ತುತರುವ ಸಾರ್ವಜನಿಕರಿಗೆ ಅಷ್ಟೇ ವೇಗದಲ್ಲಿ ಪರಿಹಾರವನ್ನು ರೂಪಿಸುವಲ್ಲಿ ಶಾಸಕ ಯಶಸ್ವಿಯಾಗಿದ್ದಾರೆಂದರು. ಹಲವಾರು ಮುಖಂಡರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಭಗತ್ ಸಿಂಗರ ಚಿಂತನೆ ದೇಶಭಕ್ತ ಮನಸ್ಸುಗಳನ್ನು ಆವರಿಸುತ್ತಿವೆ: ಸದ್ಗುರು ಪ್ರದೀಪ್ ಹೇಳಿಕೆ



**ಹೊಸದುರ್ಗ:** ಭಗತ್ ಸಿಂಗ್ ತಮ್ಮ ದೇಶಪ್ರೇಮದಿಂದ ಪರಕೀಯ ಆಡಳಿತವನ್ನು ಮಂಡಿಯೂರಿಸಲು ಶ್ರಮಿಸಿದರೆ, ಮತ್ತೊಂದೆಡೆ ತಮ್ಮ ವಿಚಾರಗಳಿಂದ ವಿಭಾಜಿತ ಭಾರತವನ್ನು ಸ್ವಾತಂತ್ರ್ಯ ಹೋರಾಟದಲ್ಲಿ ಒಗ್ಗೂಡಿಸಲು ಶ್ರಮಿಸಿದರು. ಭಗತ್ ಸಿಂಗರ ದೇಶಭಕ್ತಿ ಮತ್ತು ಅವರ ಚಿಂತನೆಗಳು ದೇಶಪ್ರೇಮಿಗಳಲ್ಲಿ ದೇಶ ಸೇವೆ ಎಂಬ ಕಿಡಿಯನ್ನು ಹತ್ತಿಸುತ್ತಿವೆ. ಅಲ್ಲದೇ ಯುವ ಮನಸ್ಸುಗಳನ್ನು ಆವರಿಸುತ್ತಿದೆ ಎಂದು ಸದ್ಗುರು ಆಯುರ್ವೇದ ಉತ್ಪನ್ನಗಳ ಮಾಲೀಕ ಡಿ.ಎಸ್. ಪ್ರದೀಪ್ ಹೇಳಿದರು.ಪಟ್ಟಣದ ಅಯೋಧ್ಯ ಮಂಟಪದಲ್ಲಿ ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಮತ್ತು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್,ಹೊಸದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಆಯೋಜಿಸಿದ್ದ ಭಗತ್ ಸಿಂಗರ ಜಯಂತಿ ಮತ್ತು ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಾಗವಹಿಸಿ ಅವರು ಮಾತನಾಡಿದರು. ನ್ಯಾಯ ಮತ್ತು ಸ್ವಾತಂತ್ರ್ಯಕ್ಕಾಗಿ ಭಾರತದ ಅವಿರತ ಹೋರಾಟದ ಪ್ರತೀಕವಾಗಿರುವ ಭಗತ್ ಸಿಂಗ್ ರ 116 ನೇ ಜನ್ಮದಿನವನ್ನು ನಾವು ನೀವೆಲ್ಲರೂ ಆಚರಣೆ ಮಾಡುತ್ತಿದ್ದೇವೆ. ಅವರ ಜನ್ಮ ದಿನಾಚರಣೆ ಒಂದು ದಿನಕ್ಕೆ ಸೀಮಿತವಾಗದೆ, ಅವರ ವಿಚಾರಧಾರೆಗಳು ಮತ್ತು ಚಿಂತನೆಗಳು ಯುವ ಮನಸ್ಸುಗಳನ್ನು ತಲುಪುವಂತೆ ಮಾಡಬೇಕೆಂದು ತಿಳಿಸಿದರು. ಯುವ ಮುಖಂಡ ತುಂಬಿನಕೆರೆ ಬಸವರಾಜ್ ಮಾತನಾಡಿ, ಭಗತ್ ಸಿಂಗರ ತ್ಯಾಗ ಮತ್ತು ಭಾರತದ ಸ್ವಾತಂತ್ರ್ಯದ ಕಾರಣಕ್ಕಾಗಿ ಅಗಲವಾದ ಸಮರ್ಪಣೆ ತಲೆಮಾರುಗಳಿಗೆ ಸ್ಫೂರ್ತಿ ನೀಡುತ್ತಿದೆ. ಧೈರ್ಯದ ದಾರಿದೀಪ ಮತ್ತು ನ್ಯಾಯ ಮತ್ತು ಸ್ವಾತಂತ್ರ್ಯಕ್ಕಾಗಿ ಭಾರತದ ನಿರಂತರ ಹೋರಾಟದ ಸಂಕೇತವಾಗಿದ್ದಾರೆ ಎಂದು ಸ್ಮರಿಸಿಕೊಂಡರು. ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ತಾಲೂಕು ಸಂಚಾಲಕ ಭಾನುಪ್ರಕಾಶ್ ಮಾತನಾಡಿ, 27 ಸೆಪ್ಟೆಂಬರ್ 1907 ರಂದು ಜನಿಸಿದ ಭಗತ್ ಸಿಂಗ್ ಒಬ್ಬ ಭಾರತೀಯ ಸಮಾಜವಾದಿ ಕ್ರಾಂತಿಕಾರಿಯಾಗಿದ್ದಾರೆ. ಭಗತ್ ಸಿಂಗ್ ಅವರು ಆಗಿನ ಬ್ರಿಟಿಷ್ ಇಂಡಿಯಾ ಮತ್ತು ಎಂದು ಪಾಕಿಸ್ತಾನದಲ್ಲಿರುವ ಪಂಜಾಬ್ ನ ಬಂಗಾ ಗ್ರಾಮದಲ್ಲಿ ಪಂಜಾಬಿ ಸಿಖ್ ಕುಟುಂಬದಲ್ಲಿ ಜನಿಸಿದರು. ಅವರ ಜೀವನದಲ್ಲಿ ನಡೆದ ಮುಖ್ಯ ಘಟನೆಗಳಾದ ದೆಹಲಿಯ ಸೆಂಟ್ರಲ್ ಲೆಜಿಸ್ಲೇಟಿವ್ ಅಸೆಂಬ್ಲಿಯ ಮೇಲೆ ಸಂಕೇತಿಕ ಬಾಬ್ ದಾಳಿ ಮತ್ತು ಉಪವಾಸ ಸತ್ಯಗ್ರಹದಲ್ಲಿ ಭಾಗವಹಿಸಿದರು, ಇದು ಅವರನ್ನು ಪಂಜಾಬ್ ಪ್ರದೇಶದಲ್ಲಿ ಮನೆಮಾತಾಗಿ ಪರಿವರ್ತಿಸಿತು ಎಂದು ಭಗತ್ ಸಿಂಗರ ಜೀವನ, ಸಾಧನೆ ಮತ್ತು ಚಿಂತನೆಗಳ ಬಗ್ಗೆ ತಿಳಿಸಿದರು. ಈ ವೇಳೆ ಯುವ ಉದ್ಯಮಿ ದಿಲೀಪ್ ಗುರುಸ್ವಾಮಿ, ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಅಧ್ಯಕ್ಷ ಪ್ರದೀಪ್ ಮತ್ತು ಮುಖಂಡ ನವೀನ್ ಸೇರಿದಂತೆ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಸದಸ್ಯರಿದ್ದರು. ಇದೇ ಸಂದರ್ಭದಲ್ಲಿ 50ಕ್ಕೂ ಹೆಚ್ಚು ಜನರು ಸ್ವಯಂ ಪ್ರೇರಿತವಾಗಿ ಬಂದು ರಕ್ತದಾನ ಮಾಡಿದರು.

## ಹೆಗ್ಗೆರೆ ಗ್ರಾಮದ ರಸ್ತೆಯ ಮೇಲೆ ಹರಿಯುವ ಚರಂಡಿ ನೀರು: ಸಾಂಕ್ರಾಮಿಕ ರೋಗದ ಬೀತಿಯಲ್ಲಿ ಗ್ರಾಮಸ್ಥರು.

**ಚಳ್ಳಕೆರೆ:** ತಾಲ್ಲೂಕಿನ ಸಾಣಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೆಗ್ಗೆರೆ ಗ್ರಾಮದ ಬಹುತೇಕ ರಸ್ತೆಗಳು ಪೂರ್ಣಪ್ರಮಾಣದಲ್ಲಿ ಹದಗೆಟ್ಟಿದ್ದು, ಗ್ರಾಮದಲ್ಲಿರುವ ಚರಂಡಿಗಳಲ್ಲೂ ಸಹ ನೀರು ನಿಂತು ಕೊಳಚೆ ವಾಸನೆ ಬರುತ್ತಿದೆ. ಇದರಿಂದ ಸೊಳ್ಳೆಗಳಕಾಟ ಹೆಚ್ಚಾಗಿ ಸಾಂಕ್ರಾಮಿಕ ರೋಗ ಹರಡುವ ಲಕ್ಷಣ ಹೆಚ್ಚಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಈ ಬಗ್ಗೆ ಅಸಮದಾನ ವ್ಯಕ್ತಪಡಿಸಿರುವ ಗ್ರಾಮಸ್ಥರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಲವಾರು ಬಾರಿ ಮನವಿ ನೀಡಿದರೂ ಯಾವುದೇ ಕ್ರಮ ವಹಿಸುತ್ತಿಲ್ಲ, ಪ್ರತಿನಿತ್ಯ ಸಾರ್ವಜನಿಕರು, ಮಹಿಳೆಯರು, ಮಕ್ಕಳು ಚರಂಡಿಯ ದುರ್ವಾಸನೆ ಕುಡಿದು ರಸ್ತೆಗಳಲ್ಲಿ ಓಡಾಡಬೇಕಾದ ಪರಿಸ್ಥಿತಿ ಉಂಟಾಗಿದೆ. ಮಲೇರಿಯಾ, ಡೆಂಗ್ಯೂ ಜ್ವರದಂತಹ ಹರಡುವ ಆತಂಕ ಎದುರಾಗಿದೆ. ಆದ್ದರಿಂದ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಆಡಳಿತ ಈ ಬಗ್ಗೆ ಕೂಡಲೇತುರ್ತು ಹಗಮಹರಿಸುವಂತೆ ಗ್ರಾಮಸ್ಥರಾದ ದಯಾನಂದ, ತಿಪ್ಪೇಸ್ವಾಮಿ, ವಿನೋದ, ಕಿರಣ ಮುಂತಾವರು ಆಗ್ರಹಿಸಿದ್ದಾರೆ.

# ಮಕ್ಕಳ ಸ್ನೇಹಿ ಗ್ರಂಥಾಲಯ ತರಬೇತಿ ಕಾರ್ಯಾಗಾರ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಮಕ್ಕಳ ಸ್ನೇಹಿ ಗ್ರಂಥಾಲಯ ಬಗ್ಗೆ ತರಬೇತಿ ಕಾರ್ಯಾಗಾರ ನಡೆಯಿತು.

ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ತೆರೆದ ಕಿಟಕಿ ಮನೆಯ ಬೆಳಕಿಗೆ, ತೆರೆದ ಪುಸ್ತಕ ಮನದ ಬೆಳಕಿಗೆ ಎಂಬ ಡಿ.ವಿ.ಗುಂಡಪ್ಪನವರ ಸಾಲುಗಳನ್ನು ನೆನಪಿಸಿಕೊಂಡು ಗ್ರಾಮೀಣ ಗ್ರಂಥಪಾಲಕರಿಗೆ ಕಿವಿಮಾತು ಹೇಳಿದರು.

"ಪ್ರಸ್ತುತ ದಿನಗಳಲ್ಲಿ ಮೊಬೈಲ್‌ಗಳ ಹಾವಳಿ ಹೆಚ್ಚಾಗಿರುವ ಕಾರಣ ಗ್ರಂಥಾಲಯಗಳಿಗೆ ಹೋಗುವವರ ಸಂಖ್ಯೆ ಕ್ಷೀಣಿಸುತ್ತಿದೆ. ಆದಾಗ್ಯೂ ಸಹ ಸರ್ಕಾರವು ಗ್ರಂಥಾಲಯಗಳನ್ನು ಉಳಿಸುವ ನಿಟ್ಟಿನಲ್ಲಿ ಅನೇಕಕಾರ್ಯಕ್ರಮಗಳನ್ನುಹಮ್ಮಿಕೊಂಡು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದರು.

ಅಜೀಂ ಪ್ರೇಮ್‌ಜಿ ಫೌಂಡೇಶನ್‌ರವರ ಸಹಯೋಗದೊಂದಿಗೆಚಿತ್ರದುರ್ಗಜಿಲ್ಲೆಯ ಗ್ರಾಮೀಣ ಭಾಗದ ಗ್ರಂಥಪಾಲಕರು, ಮೇಲ್ವಿಚಾರಕರಿಗೆ ಉಚಿತವಾಗಿ ಅದರಲ್ಲೂ







ಚಳ್ಳಕೆರೆ, ಮೊಳಕಾಲ್ಮುರು, ಹೊಸದುರ್ಗ, ಹೊಳಲ್ಕೆರೆ, ಹಿರಿಯೂರು ಮತ್ತು ಚಿತ್ರದುರ್ಗ ತಾಲ್ಲೂಕುಗಳಲ್ಲಿ ತರಬೇತಿ ಕಾರ್ಯಾಗಾರಗಳನ್ನು ಹಮ್ಮಿಕೊಂಡು ಯಶಸ್ವಿಯಾಗಿ ಗ್ರಂಥಾಲಯಗಳಿಗೆ ಪುಸ್ತಕಗಳನ್ನು ಕೊಡುವುದಲ್ಲದೇ ಗ್ರಂಥಪಾಲಕರಿಗೆ, ಮಕ್ಕಳಲ್ಲಿ ಅರಿವು ಮೂಡಿಸಲು ಆರೋಗ್ಯಕರ ಮತ್ತು ಸುರಕ್ಷಾ ವಾತಾವರಣ ನಿರ್ಮಿಸುವುದು, ಮಕ್ಕಳೊಂದಿಗೆ ಗೌರವಯುತ ನಡವಳಿಕೆಗಳು ಮತ್ತು ವ್ಯವಹಾರಗಳು, ಸೂಕ್ಷ್ಮ ಮತ್ತು ಸಂವೇದನೆ ಪೂರಕವಾದ ಮಕ್ಕಳ ಸಾಹಿತ್ಯವನ್ನು ಗುರುತಿಸುವುದು, ಹಿತಮಿತವಾಗಿ ನಿಯಮಗಳನ್ನು ಬಳಸುವುದು, ನಿರಂತರ ಓದು ಮತ್ತು ಚಟುವಟಿಕೆಗಳು, ಸ್ಥಳೀಯ ಸಂಪನ್ಮೂಲಗಳ ಬಳಕೆ ಬಗ್ಗೆ ಹಾಗೂ ಜೀವನವನ್ನು ಉತ್ತಮಗೊಳಿಸವುಲ್ಲಿ ಗ್ರಂಥಪಾಲಕರು, ಮೇಲ್ವಿಚಾಕರು ಹಾಗೂ ಶಿಕ್ಷಕರ ಪಾತ್ರ ಬಹಳ ಮುಖ್ಯವಾದುದು ಎಂದರು. 2023ರ ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 2 ರವರೆಗೆ ವಿಶೇಷ ಆಂದೋಲನವನ್ನು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಂಥಾಲಯ ಸುತ್ತಮುತ್ತಲಿನ ಪ್ರದೇಶದಲ್ಲಿ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸಿ ಶ್ರಮದಾನ ಮಾಡುವಂತೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಗ್ರಂಥಪಾಲಕರು, ಮೇಲ್ವಿಚಾರಕರು ಗ್ರಾಮೀಣ ಭಾಗದ ಜನರಲ್ಲಿ ಅರಿವು ಮೂಡಿಸಿ ಸ್ವಚ್ಛತೆಯನ್ನು ಕಾಪಾಡಲು ಶ್ರಮಿಸಬೇಕು ಎಂದು ತಿಳಿಸಿದರು. ಶಿಬಿರಾರ್ಥಿಗಳಿಗೆ ಸ್ವಚ್ಛತಾ ಪ್ರತಿಜ್ಞಾವಿಧಿಯನ್ನು ಜಿ.ಪಂ ಸಿಇಒ ಬೋಧಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಂಥಾಲಯಾಧಿಕಾರಿ ಪಿ.ಆರ್. ತಿಪ್ಪೇಸ್ವಾಮಿ, ಅಜೀಂ ಪ್ರೇಮ್‌ಜಿ ಫೌಂಡೇಶನ್‌ನ ಸಿಬ್ಬಂದಿ ರವಿ, ಸ್ವಚ್ಛ ಭಾರತ ಮಿಷನ್ (ಗ್ರಾ) ಜಿಲ್ಲಾ ಸಮಾಲೋಚಕರು ಇದ್ದರು.

# ತಂತ್ರಜ್ಞಾನ ಜಾಗರೂಕತೆಯಿಂದ ಬಳಸಿ

## ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾ.ಎಂ.ವಿಜಯ್

» **ಚಿತ್ರದುರ್ಗ**

ವಿದ್ಯಾರ್ಥಿಗಳು ತಂತ್ರಜ್ಞಾನವನ್ನು ತುಂಬಾ ಜಾಗರೂಕತೆಯಿಂದ ಬಳಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಸರ್ಕಾರಿ ವಿಜ್ಞಾನ ಕಾಲೇಜು ಇವರ ಸಹಯೋಗದೊಂದಿಗೆ ಬುಧವಾರ ಹಮ್ಮಿಕೊಂಡಿದ್ದ ಕಾನೂನು ಸಾಕ್ಷರತಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾಜಿಕ ಜಾಲತಾಣಗಳನ್ನು ತಪ್ಪಾಗಿ ಬಳಸಿದ್ದಲ್ಲಿ ಅಪರಾಧಿಯ ಸ್ಥಾನದಲ್ಲಿ ನಿಲ್ಲಬೇಕಾಗುತ್ತದೆ ಎಂಬುದನ್ನು ತಿಳಿಹೇಳಿದ ಅವರು, ಸೈಬರ್ ಅಪರಾಧಗಳು ಯಾವ ರೀತಿಯಲ್ಲಿ ಅಪಾಯಗಳನ್ನು ತಂದೊಡ್ಡುತ್ತದೆ ಎಂಬುವುದರ ಕುರಿತು ಮಾಹಿತಿ ನೀಡಿದರು.

ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮಂಜುನಾಥ್ "ಸೈಬರ್ ಕ್ರೈಮ್ಸ್ ಅಂಡ್ ಇಟ್ಸ್ ಲಾ" ಎಂಬ ವಿಷಯದ ಬಗ್ಗೆ ಉಪನ್ಯಾಸ ನೀಡಿ, ಸೈಬರ್ ಅಪರಾಧಗಳ ವಿಧಗಳು, ವಿವಿಧ ವೆಬ್‌ಸೈಟ್‌ಗಳು, ವಾಟ್ಸಪ್ ಸುರಕ್ಷತೆ ಬಗ್ಗೆ ಸವಿವರವಾಗಿ ವಿವರಣೆ




ನೀಡಿದರು.

ಇತ್ತೀಚೆಗೆ ಪೊಲೀಸ್ ಇಲಾಖೆಯಲ್ಲಿ ದಾಖಲಾದ ಸೈಬರ್ ಅಪರಾಧಗಳ ಬಗ್ಗೆಯೂ ಮಾಹಿತಿ ನೀಡಿ ವಿದ್ಯಾರ್ಥಿಗಳು ತುಂಬಾ ಎಚ್ಚರಿಕೆಯಿಂದ ಮೊಬೈಲ್‌ಗಳನ್ನು ಬಳಸಬೇಕು ಹಾಗೂ ಆನ್‌ಲೈನ್ ಜಾಬ್, ಬಹುಮಾನಗಳು ಎಂಬಆಮಿಷಕ್ಕೆಒಳಗಾಗಿಮೋಸಹೋಗಬಾರದು ಎಂದು ಹೇಳಿದರು.

ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್‌ಕುಮಾರ್ ಮಾ ತನಾಡಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸೇವೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಗಂಗಾಧರ್, ಕಾಲೇಜಿನ ಪ್ರಾಂಶು ಪಾಲ ಪ್ರೊ.ಸಿದ್ರಾಮ ಚನ್ನಗೊಂಡ, ಪ್ರಾಧ್ಯಾಪಕರಾದ ಡಾ.ರಮೇಶ್ ಅಯ್ಯನಹಳ್ಳಿ, ಪ್ರೊ.ಕೆ.ಬಿ.ವಿದ್ಯಾ, ಡಾ.ಮಹೇಶ್ ನಾಯ್ಕ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಹಿಂದೂ ಯುವ ಶಕ್ತಿ ವೇದಿಕೆ ಗಣೇಶೋತ್ಸವ



» **ದಾವಣಗೆರೆ**

ನಗರದ ತೊಗಟವೀರ ಕಲ್ಯಾಣ ಮಂಟಪದಲ್ಲಿ ಹಿಂದೂ ಯುವ ಶಕ್ತಿ ವೇದಿಕೆಯಿಂದ 32ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಪ್ರತಿಷ್ಟಾಪಿಸಲಾಗಿರುವ205 ಕೆಜಿ ಗೋಪಿ ಚಂದನದ ಗಣೇಶಮೂರ್ತಿಯ ದರ್ಶನವನ್ನು ಮಾಯಕೊಂಡ ಕ್ಷೇತ್ರದ ಬಿಜೆಪಿ ಯುವ ಮುಖಂಡರಾದ ಜಿ.ಎಸ್. ಶ್ಯಾಮ್ ಇಂದು ಪಡೆದರು.ಅಲ್ಲದೇ ಗಣಹೋಮ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾದರು. ಜೊತೆಗೆ ಕಮಿಟಿ ವತಿಯಿಂದ ಹಮ್ಮಿಕೊಂಡಿದ್ದ ಅನ್ನಸಂತರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಕ್ತರಿಗೆ ಪ್ರಸಾದ ವಿತರಿಸುವ ಮೂಲಕ ಭಕ್ತಿ ಸಮರ್ಪಿಸಲಾಯಿತು. ಸಂಸದರಾದ ಜಿ.ಎಂ. ಸಿದ್ದೇಶ್ವರ್ ಅವರ ಧರ್ಮಪತ್ನಿ ಗಾಯತ್ರಿ ಸಿದ್ದೇಶ್ವರ್ ಉಪಸ್ಥಿತರಿದ್ದರು.

# ಹೊಸದುರ್ಗದಲ್ಲಿ ವಿಜೃಂಭರಣೆಯಿಂದ ನಡೆದ ಓಂ ಗಣಪತಿ ಮೆರವಣಿಗೆ

» **ಹೊಸದುರ್ಗ**

ಪಟ್ಟಣದ ಅಶೋಕ ರಂಗಮಂದಿರದ ಶ್ರೀ ದುರ್ಗಾದೇವಿ ವೇದಿಕೆಯಲ್ಲಿ ಓಂ ಗಣಪತಿ ಭಕ್ತಮಂಡಳಿಯ ವತಿಯಿಂದ ಪ್ರತಿಷ್ಠಾಪಿಸಲಾಗಿದ್ದ ಓಂ ಗಣಪತಿ ವಿಸರ್ಜನಾ ಮೆರವಣಿಗೆಯು ವೈಭವಯುತವಾಗಿ ಪಟ್ಟಣದ ರಾಜ ಬೀದಿಯಲ್ಲಿ ಸಡಗರ ಹಾಗೂ ಸಂಬ್ರಮದಿಂದ ಅದ್ದೂರಿಯಾಗಿ ಭವ್ಯ ರೀತಿಯಲ್ಲಿ ನಡೆಯಿತು.

ಮೆರವಣಿಗೆಯಲ್ಲಿ ಡಿಜೆ ಬ್ಯಾಂಡ್‌ಸೆಟ್, ನಾಗಸ್ವರ,ವಾದ್ಯಮೇಳ,ಡೊಳ್ಳು,ಕೋಲ ೨ಟ ತಾಳ ಮೇಳ, ಮಹಿಳೆಯರ ತಾಳ ಕುಣಿತ, ಡ್ರಂ ಸೇರಿದಂತೆ ನಾನಾ ರೀತಿಯ





ಜಾನಪದ ತಂಡಗಳು ಪಾಲ್ಗೊಂಡು ಉತ್ಸವಕ್ಕೆ ಮೆರಗು ತಂದಿತು.

ಉತ್ಸವದ ಅಂಗವಾಗಿ ಪ್ರಮುಖ ರಸ್ತೆಯ ಕಟ್ಟೆಗಳಿಗೆ,ಅಂಗಡಿಗಳಿಗೆ ಪುಷ್ಪಾಲಂಕಾರ ಮತ್ತು ವಿದ್ಯುತ್ ದೀಪಾಲಂಕಾರವನ್ನ ಮಾಡಲಾಗಿತ್ತು.ಮೆರವಣಿಗೆ ಮಾರ್ಗದಲ್ಲಿ ಎಲ್ಲೆಲ್ಲೂ ಸಹಾ ಕೇಸರಿ ತೋರಣಗಳು ಕಂಗೊಳಿಸುತ್ತಿದ್ದವು,ದಾರಿಯುದ್ದಕ್ಕೂ ಹಸಿರು ತಳಿರು ತೋರಣಗಳನ್ನ ಕಟ್ಟಲಾಗಿತ್ತು.

ಉತ್ಸವದಲ್ಲಿಬೃಹತ್‌ಸಂಖ್ಯೆಯಲ್ಲಿಸೇರಿದ್ದ ಜನರು ಜೈಕಾರ ಕೂಗುತ್ತಿದ್ದರು,ಅಲ್ಲಲ್ಲಿ ಯುವಕರು ಗುಂಪು ಗುಂಪಾಗಿ ಡಿಜೆ ಸೌಂಡಿಗೆ ಕುಣಿದು ಕುಪ್ಪಳಿಸುತಾ ಸಂಬ್ರಮಾಚರಣೆ ಸವಿದರು ಜೊತೆಗೆ ಸಿವಿಲ್ ಡ್ರೆಸ್‌ನಲ್ಲಿದ್ದ ಪೋಲಿಸ್ ಯುವ ಪೇದೆಗಳು ಯುವಕರ ಜೋತೆಗೆ ಕುಣಿತಕ್ಕೆ ಸಾಥ್ ನೀಡಿದರು.ಮನೆಗಳ ಮುಂದೆ ಬಣ್ಣ ಬಣ್ಣದ ರಂಗೋಲಿ ಹಾಕಿ ಉತ್ಸವವನ್ನ ಸ್ವಾಗತಿಸುತ್ತಿದ್ದರು.ರಸ್ತೆಯ ಇಕ್ಕೆಡೆಗಳಲ್ಲಿ ಜನರ ಕಿಕ್ಕಿರಿದು ಸೇರಿದ್ದರು.

ಸಾಲಂಕೃತ ಸಾರೋಡಿನಲ್ಲಿ ಸಾಗಿ ಬಂದ ಓಂ ಗಣಪತಿಗೆ ಪ್ರತಿ ಮನೆಯ ಮುಂದೆ ಪೂಜೆ ಸಲ್ಲಿಸಲಾಯಿತು.ದಿನವಿಡಿ ವೈಭವಯುತವಾಗಿ ನಡೆದ ಉತ್ಸವದ ನಂತರ ಸಂಜೆ ಗಣೇಶ ಮೂರ್ತಿಯ ವಿಸರ್ಜನೆಯು ಪುರಸಭೆಯವರು ನಿಗದಿ ಮಾಡಿದ್ದ ಸ್ಥಳದಲ್ಲಿ ವಿಸರ್ಜನೆ ಸಾಂಗವಾಗಿ ನೆರವೇರಿತು.

**ಪ್ರಮುಖ ಸುದ್ದಿ**

# ಕಾಲುಬಾಯಿ ರೋಗ ನಿರೋಧಕ ಲಸಿಕೆ ನೀಡುವ ಮೂಲಕ ಜಾನುವಾರಗಳ ಪ್ರಾಣ ರಕ್ಷಣೆಗೆ ಮುಂದಾಗಿ: ಟಿ.ರಘುಮೂರ್ತಿ

» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಸುಮಾರು 70 ಸಾವಿರಕ್ಕೂ ಹೆಚ್ಚು ಜಾನುವಾರುಗಳಿದ್ದು, ಯಾವುದೇ ಗ್ರಾಮದಲ್ಲಿ ಯಾವುದೇ ಜಾನುವಾರು ಕಾಲುಬಾಯಿ ರೋಗದಿಂದ ಸಾವನಪ್ಪದಂತೆ ಪಶುವೈದ್ಯ ಇಲಾಖೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕಿನ ಕುರುಡಿಹಳ್ಳಿ ಪುಣ್ಯಕೋಟಿ ಗೋಶಾಲೆಯಲ್ಲಿ ಕಾಲುಬಾಯಿ ರೋಗ ನಿರೋಧಕ ಲಸಿಕೆಯನ್ನು ಜಾನುವಾರುಗಳಿಗೆ ಲಸಿಕೆ ಹಾಕಿ, ಪೋಸ್ಟರ್ ಬಿಡುಗಡೆಗೊಳಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಕಳೆದ ಸುಮಾರು ಮೂರು ವರ್ಷಗಳಿಂದಲೂ ಸಹ ಜಾನುವಾರುಗಳಿಗೆ ಈ ಲಸಿಕೆ ಮುಂಜಾಗ್ರತಾ ಕ್ರಮವಾಗಿ ಹಾಕುವುದರಿಂದ ಸಾವಿರಾರು ಜಾನುವಾರುಗಳು ಜೀವರಕ್ಷಣೆ ಪಡೆದಂತಾಗಿದೆ. ಈ ಬಾರಿಯೂ ಸಹ ಎಲ್ಲಾ




ಚಳ್ಳಕೆರೆ ತಾಲ್ಲೂಕಿನ ಕುರುಡಿಹಳ್ಳಿ ಪುಣ್ಯಕೋಟಿ ಗೋಶಾಲೆಯಲ್ಲಿ ಕಾಲುಬಾಯಿ ರೋಗ ನಿರೋಧಕ ಲಸಿಕಾ ಅಭಿಯಾನದ ಪೋಸ್ಟರ್‌ಗಳನ್ನು ಶಾಸಕ ಟಿ.ರಘುಮೂರ್ತಿ ಬಿಡುಗಡೆಗೊಳಿಸಿದರು.

ಜಾನುವಾರುಗಳಿಗೆ ಕಡ್ಡಾಯವಾಗಿ ಲಸಿಕೆ ಹಾಕಬೇಕು. ಅಗತ್ಯವಿದ್ದಲ್ಲಿ ಹೆಚ್ಚಿನ ಸಿಬ್ಬಂದಿ ಹಾಗೂ ಲಸಿಕೆಯನ್ನು ತರಿಸಿಕೊಂಡು ತ್ವರಿತಗತಿಯಲ್ಲಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿದರು.

ಪಶುವೈದ್ಯ ಇಲಾಖೆಯ ಸಹಾಯಕ ನಿರ್ದೇಶಕ ಟಿ.ಎಸ್.ರೇವಣ್ಣ ಮಾತನಾಡಿ, ಒಂದು ತಿಂಗಳ ಕಾಲ ಈ ಲಸಿಕಾ ಅಭಿಯಾನ ಮುಂದುವರೆಯಲಿದೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪಶುವೈದ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮನೆ,ಮನೆಗೂ ತೆರಳಿ ಜಾನುವಾರುಗಳನ್ನು ಪತ್ತೆಹಚ್ಚಿ ಉಚಿತವಾಗಿ ಲಸಿಕೆಯನ್ನು ಹಾಕುತ್ತಾರೆ. ಇದುವರೆಗೂ ಸುಮಾರು ಎರಡು ಸಾವಿರಕ್ಕೂ ಹೆಚ್ಚು ಜಾನುವಾರುಗಳಿಗೆ ಲಸಿಕೆ ನೀಡಿದ್ದು ಇದು ಅ.25ರವರೆಗೂ ಮುಂದುವರೆಯಲಿದೆ ಎಂದರು. ತಹಶೀಲ್ದಾರ್ ರೇಹಾನ್ ಪಾಷ, ಪಶುವೈದ್ಯಾಧಿಕಾರಿಗಳಾದ ಡಾ.ವಿಜಯಕುಮಾರ್, ಡಾ.ರಂಗಸ್ವಾಮಿ, ಡಾ.ನರೇಶ್, ಹಿರಿಯ ಪಶು ಪರೀಕ್ಷಕ ಜಯಣ್ಣ, ಬೈಯಣ್ಣ, ಇರಾನಾಯ್ಕ, ಚನ್ನಪ್ಪ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಜಿ.ಟಿ.ತಿಪ್ಪೇಶ್, ಕೆಎಂಎಫ್ ನಿರ್ದೇಶಕ ಸಿ.ವೀರಭದ್ರಬಾಬು ಮುಂತಾದವರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಜನನ ನಿಯಂತ್ರಣದಲ್ಲಿ ಪಪ್ಪಾಯಿಯನ್ನು ಹೇಗೆ ಬಳಸಲಾಗುತ್ತದೆ?



**ನಮ್ಮ ಜನ ಆರೋಗ್ಯ ಕಾರ್ನರ್:** ಪಪ್ಪಾಯಿ(ಕಚಿಠಿಚಿಥಿಚಿ)ಯು ನಿಮ್ಮ ಆರೋಗ್ಯಕ್ಕೆ ಉತ್ತಮ ಸೇವನೆಯಾಗಿದೆ. ಈ ಹಣ್ಣಿನಲ್ಲಿ ಫೈಬರ್, ಪೊಟ್ಯಾಸಿಯಮ್, ವಿಟಮಿನ್ ಸಿ ಮತ್ತು ವಿಟಮಿನ್ ಎ ಸಮೃದ್ಧವಾಗಿದೆ. ಹೆಚ್ಚುವರಿಯಾಗಿ, ಇದು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ ಮತ್ತು ನಿಮ್ಮ ರಕ್ಷಣೆಯನ್ನು ಬಲಪಡಿಸುತ್ತದೆ.
ಇದು ನಿಮ್ಮ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡುವುದಲ್ಲದೆ ತೂಕ ಇಳಿಸುವಲ್ಲಿ ಸಹ ಸಹಾಯ ಮಾಡುತ್ತದೆ. ಆದಾಗ್ಯೂ, ಆಯುರ್ವೇದದಂತಹ ಸಾಂಪ್ರದಾಯಿಕ ವೈದ್ಯಕೀಯ ಅಭ್ಯಾಸಗಳಲ್ಲಿ ನೈಸರ್ಗಿಕ ಗರ್ಭನಿರೋಧಕವಾಗಿ ಪಪ್ಪಾಯಿಯನ್ನು ಯುಗಗಳಿಂದಲೂ ಬಳಸಲಾಗುತ್ತಿದೆ.

### ಜನನ ನಿಯಂತ್ರಣಕ್ಕೆ ಪಪ್ಪಾಯಿಯನ್ನು ಏಕೆ ಬಳಸಬಹುದು?

ವೈಜ್ಞಾನಿಕ ಅಧ್ಯಯನಗಳ ಅನುಪಸ್ಥಿತಿಯ ಹೊರತಾಗಿಯೂ ಪಪ್ಪಾಯಿಯನ್ನು ಪ್ರಪಂಚದ ಅನೇಕ ಪ್ರದೇಶಗಳಲ್ಲಿ ನೈಸರ್ಗಿಕ ಗರ್ಭನಿರೋಧಕವಾಗಿ ಇನ್ನೂ ಸಾಮಾನ್ಯವಾಗಿ ಬಳಸಲಾಗುತ್ತದೆ. ವಿಟಮಿನ್ ಎ ಮತ್ತು ಸಿ ಮತ್ತು ಪೊಟ್ಯಾಸಿಯಮ್ ಮತ್ತು ಫೈಬರ್‌ನಂತಹ ಇತರ ಖನಿಜಗಳ ಸಮೃದ್ಧ ಮೂಲವಾದ ಪಪ್ಪಾಯಿಯು ಗರ್ಭನಿರೋಧಕ ಪರಿಣಾಮಗಳನ್ನು ಹೊಂದಿರಬಹುದು. ಬಲಿಯದ ಪಪ್ಪಾಯಿಯು ಈ ವ್ಯವಸ್ಥೆಗಳಲ್ಲಿ ಕಿಣ್ವಗಳನ್ನು ಒಳಗೊಂಡಿರುತ್ತದೆ ಎಂದು ಭಾವಿಸಲಾಗಿದೆ. ಇದು ಗರ್ಭಾವಸ್ಥೆಗೆ ಅಗತ್ಯವಾದ ಹಾರ್ಮೋನ್ ಪ್ರೊಜೆಸ್ಟರಾನ್‌ನೊಂದಿಗೆ ಸಂಘರ್ಷಕ್ಕೆ ಕಾರಣವಾಗಬಹುದು. ಆದಾಗ್ಯೂ, ಜನನ ನಿಯಂತ್ರಣ ವಿಧಾನವಾಗಿ ಪಪ್ಪಾಯಿಯ ಬಳಕೆಯ ಬಗ್ಗೆ ಪಾಶ್ಚಿಮಾತ್ಯ ವೈದ್ಯಕೀಯದಲ್ಲಿ ಕಡಿಮೆ ಸಂಶೋಧನೆ ಇದೆ.

### ಗರ್ಭಿಣಿಯರು ಪಪ್ಪಾಯಿಯನ್ನು ಏಕೆ ಸೇವಿಸಬಾರದು?

ಕೆಲವು ಸಂಶೋಧನೆಗಳ ಪ್ರಕಾರ, ಪಪ್ಪಾಯಿಯು ಉರಿಯೂತದ ಮತ್ತು ಉತ್ಕರ್ಷಣ ನಿರೋಧಕ ಗುಣಲಕ್ಷಣಗಳನ್ನು ಹೊಂದಿರಬಹುದು. ಇದು ಆರೋಗ್ಯಕರ ಆಹಾರಕ್ಕೆ ಸಂಭಾವ್ಯ ಆಸ್ತಿಯಾಗಿದೆ. ಮಾಗಿದ ಪಪ್ಪಾಯಿಯನ್ನು ತಿನ್ನುವುದು ಸುರಕ್ಷಿತವಾಗಿದ್ದರೂ, ಗರ್ಭಿಣಿಯರು ಅರೆ-ಮಾಗಿದ ಅಥವಾ ಬಲಿಯದ ಪ್ರಭೇದಗಳನ್ನು ಸೇವಿಸುವುದರಿಂದ ದೂರವಿರಬೇಕು. ಇದು ಲ್ಯಾಟೆಕ್ಸ್ (ಕಿಣ್ವಗಳು ಅಥವಾ ಪಪ್ಪಾಯಿಯಿಂದ ಹೊರಬರುವ ಹಾಲಿನ-ಬಿಳಿ ದ್ರವ) ಕಾರಣದಿಂದಾಗಿ ಇದು ಗರ್ಭಾಶಯದ ಸಂಕೋಚನಕ್ಕೆ ಕಾರಣವಾಗಬಹುದು ಮತ್ತು ಪ್ರೋಸ್ಟಗ್ಲಾಂಡಿನ್ ಬಿಡುಗಡೆಗೆ ಕಾರಣವಾಗಬಹುದು.
ಇದು ವಿವಿಧ ಹಾರ್ಮೋನ್-ತರಹದ ಪರಿಣಾಮಗಳನ್ನು ಹೊಂದಿರುವ ಸಂಯುಕ್ತಗಳ ಗುಂಪು, ವಿಶೇಷವಾಗಿ ಗರ್ಭಾಶಯದ ಸಂಕೋಚನವನ್ನು ಉತ್ತೇಜಿಸುವುದು. ಇದು ಗರ್ಭಪಾತದ ಅಪಾಯವನ್ನು ಹೆಚ್ಚಿಸುತ್ತದೆ. ಸರಿಯಾಗಿ ಬಳಸಿದರೆ, ನೈಸರ್ಗಿಕ ಪರಿಹಾರಗಳು ಅಗ್ಗವಾಗಿರುತ್ತವೆ ಮತ್ತು ಯಾವುದೇ ಋಣಾತ್ಮಕ ಪರಿಣಾಮಗಳನ್ನು ಹೊಂದಿರುವುದಿಲ್ಲ. ಹೇಗಾದರೂ, ಗರ್ಭಾವಸ್ಥೆಯಲ್ಲಿ ಪಪ್ಪಾಯಿ ತಿನ್ನುವುದು ನಿಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರಬಹುದು ಎಂದು ನೀವು ಕಾಳಜಿವಹಿಸುತ್ತಿದ್ದರೆ, ಹಾಗೆ ಮಾಡುವುದು ಸುರಕ್ಷಿತವೇ ಎಂದು ನಿರ್ಧರಿಸಲು ನಿಮ್ಮ ಸ್ತ್ರೀರೋಗತಜ್ಞರನ್ನು ಸಂಪರ್ಕಿಸಿ.

## ಬಂದ್‌ಗೆ ಬೆಂಬಲ



**ದಾವಣಗೆರೆ:** ತಮಿಳುನಾಡಿಗೆ ನೀರು ಹರಿಸುತ್ತಿರುವುದನ್ನು ಖಂಡಿಸಿ ವಿವಿಧ ಸಂಘಟನೆಗಳು ಸೆ.29ರಂದು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ಸುವರ್ಣ ಕರ್ನಾಟಕ ಹಿತರಕ್ಷಣಾ ವೇದಿಕೆ ಬೆಂಬಲ ಸೂಚಿಸಿದೆ ಎಂದು ಸಂಸ್ಥಾಪಕ ಅಧ್ಯಕ್ಷ ಟಾರ್ಗೆಟ್ ಅಸ್ಲಾಂ ತಿಳಿಸಿದ್ದಾರೆ. ರಾಜ್ಯದಲ್ಲಿ ಬರಗಾಲ ಪರಿಸ್ಥಿತಿಯಿದೆ. ಕಾವೇರಿ ಭಾಗದ ಜಿಲ್ಲೆಗಳಲ್ಲಿ ನೀರು ಸಿಗದೆ ಬೆಳೆಗಳು ಒಣಗುತ್ತಿವೆ. ಬೆಂಗಳೂರಿಗೆ ಕುಡಿಯಲು ನೀರಿಲ್ಲ. ಇಂತಹ ಸಂದರ್ಭದಲ್ಲಿ ತಮಿಳುನಾಡಿಗೆ ನೀರು ಹರಿಸಲಾಗುತ್ತಿದೆ. ತಮಿಳುನಾಡಿಗೆ ಹರಿಯುವ ನೀರು ನಿಲ್ಲಬೇಕು. ಕೇಂದ್ರ ಸರ್ಕಾರ ಕಾವೇರಿ ವಿಚಾರದಲ್ಲಿ ಮಲತಾಯಿ ಧೋರಣೆ ಮಾಡುತ್ತಿದೆ. ಮಲತಾಯಿ ಧೋರಣೆ ನಿಲ್ಲಿಸಿ, ಈ ಸಮಸ್ಯೆಯನ್ನು ಬಗೆಹರಿಸಲು ಕೇಂದ್ರ ಸರ್ಕಾರ ಪ್ರಯತ್ನಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಬಲಪಂಥೀಯ ವಿಚಾರಧಾರೆಗೆ ಹೊಸ ದಿಕ್ಕು ತೋರಿದ ನಾಯಕ ದೀನ ದಯಾಳ್

» **ಹೊಸದುರ್ಗ**

ಪಂಡಿತ ದೀನದಯಾಳ ಉಪಾಧ್ಯಾಯರು ಭಾರತ ಕಂಡ ಅದ್ಬುತ ದಾರ್ಶನಿಕ, ಅರ್ಥಶಾಸ್ತ್ರ ಇತಿಹಾಸಕಾರ ಪತ್ರಕರ್ತ ಮತ್ತು ರಾಜಕೀಯ ಕಾರ್ಯಕರ್ತ ಪಂಡಿತ ದೀನದಯಾಳ ಉಪಾಧ್ಯಾಯರು ಬಲಪಂಥೀಯ ವಿಚಾರಧಾರೆಗೆ ಹೊಸ ದಿಕ್ಕು ತೋರಿದ ನಾಯಕ ಎಂದು ಹೊಸದುರ್ಗ ಸರ್ಕಾರಿ ಆಸ್ಪತ್ರೆಯ ವೀರೇಂದ್ರ ಪಾಟೀಲ್ ತಿಳಿಸಿದರು.

ತಾಲೂಕಿನ ಮತ್ತೋಡು ಗ್ರಾಮದ ಇಲ್ಕಲ್ ವಜ್ರಪ್ಪ ಬಾಳೆಗೊಂದು ಗುರಿ ಪದವಿಪೂರ್ವ ಕಾಲ್ಲೇಜ್‌ನಲ್ಲಿ ನೆಹರು ಯುವ ಕೇಂದ್ರ ಚಿತ್ರದುರ್ಗ ಅಮೃತವರ್ಷಿಣಿ ಕಲಾಸಂಘ ಹೊಸದುರ್ಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಪಂಡಿತ್ ದೀನದಯಾಳು ಉಪಾಧ್ಯಾಯರ ಜನ್ಮದಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.




ಪಂಡಿತ್ ದೀನದಯಾಳ ಉಪಾಧ್ಯಾಯರು ಕಾಂಗ್ರೆಸ್ಸಿಗೆ ಪರ್ಯಾಯವಾಗಿ ಭಾರತೀಯ ಜನಸಂಘ ಎಂಬ ರಾಜಕೀಯ ಶಕ್ತಿಯನ್ನು ಪೋಷಿಸಿದವರು ಅವರು ಕಾಲವಾದ ನಂತರ ಭಾರತೀಯ ಜನಸಂಘವು ಭಾರತೀಯ ಜನತಾ ಪಕ್ಷವಾಗಿ ಮಾರ್ಪಟ್ಟು ಇಂದಿನ ಬಿಜೆಪಿ ಉದಯಕ್ಕೆ ಕಾರಣವಾಯಿತು ಇಂಥ ಮಹನೀಯರು ಉತ್ತರ ಪ್ರದೇಶದ ಮಥುರಾ ಜಿಲ್ಲೆಯ ನಗಲಾ ಚಂದ್ರವನ ಗ್ರಾಮದಲ್ಲಿ ದೀನದಯಾಳ್ ಉಪಾಧ್ಯಾಯರು ಜನಿಸಿದರು ಅವರ ತಂದೆ ಭಗವತೇ ಪ್ರಸಾದ್ ಅವ ರೂ ಖ್ಯಾತ ಜ್ಯೋತಿಷಿಯಾಗಿದ್ದರು ಚಿಕ್ಕ ವಯಸ್ಸಿನಲ್ಲಿ ಅಪ್ಪ-ಅಮ್ಮ ಕಳೆದುಕೊಂಡ ದೀನದಯಾಳರು ಶಿಕ್ಷಣದಲ್ಲಿ ಅಪ್ರತಿಮ ಬುದ್ಧಿವಂತಿಕೆ ತೋರಿದರು ಸಿಕ್ಕಾರ್ ಮಹಾರಾಜ ಕಲ್ಯಾಣ ಸಿಂಗ್ ದೀನದಯಾಳಿಯರಿಗೆ ಬಂಗಾರದ ಪದಕ ನೀಡಿ ಆತನ ಶಿಕ್ಷಣಕ್ಕೆ ನೀರೆರೆದರು. 1951ರಲ್ಲಿ ಡಾಕ್ಟರ್ ಶಾಮ್ ಪ್ರಸಾದ್ ಮುಖರ್ಜಿ ಅವರು ಭಾರತೀಯ ಜನಸಂಘವನ್ನು ಸ್ಥಾಪಿಸಿದಾಗ ದೀನ ದಯಾಳರು ಆ ಸಂಘಟನೆಯ ಮೊದಲ ಪ್ರಧಾನ ಕಾರ್ಯದರ್ಶಿಯಾದರು

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಜುನಾಥ ಪರಶುಪಾಲರು ವಹಿಸಿಕೊಂಡಿದ್ದರು ವೇದಿಕೆಯಲ್ಲಿ ಅಮೃತವರ್ಷಿಣಿಕಲಾ ಸಂಘದ ಅಧ್ಯಕ್ಷರಾದ ಮೂರ್ತಿ ಓ ರವರು ತಾರುಣಿ ಶೋಭಾ ರಾಣಿ,ಲಿಖಿತ ವೇದಿಕೆಯಲ್ಲಿದ್ದರು.

# ಕಂಚೀವರದರಾಜ ಸ್ವಾಮಿ ಬುತ್ತಿಬಾನದ ಮೆರವಣಿಗೆ

» **ಹೊಸದುರ್ಗ**

ತಾಲೂಕಿನ ಮತ್ತೋಡು ಹೋಬಳಿ ಕಂಚೀಪುರ ಗ್ರಾಮದಲ್ಲಿನ ಕಾಂಚಾಣದ ದೇವರು ಎಂದು ಪ್ರಖ್ಯಾತಿ ಹೊಂದಿರುವ ಶ್ರೀ ಕಂಚೀವರದರಾಜಸ್ವಾಮಿಯವರ ಉತ್ತರೆ ಮಳೆ ಅಂಬಿನೋತ್ಸವದ ಅಂಗವಾಗಿ ಬುತ್ತಿ ಬಾನದ ಮೆರವಣಿಗೆ ಅತ್ಯಂತ ಅದ್ದೂರಿಯಾಗಿ ಜರುಗಿತು.

ಈ ಸಂಬಂಧ ಬೆಳಗಿನ ಜಾವ ಉಪವಾಸವಿದ್ದ ನಿಯೋಜಿತ ವ್ಯಕ್ತಿಯೊರ್ವ ಹೊಸದಾಗಿ ತಂದಿದ್ದ ಮಣ್ಣಿನ ಮಡಕೆಯಲ್ಲಿ 16 ಸೇರು ಅಕ್ಕಿಯ ಅನ್ನ ತಯಾರಿಸಿ ಅದಕ್ಕೆ ಬಾಳೆಹಣ್ಣು, ಮೊಸರು, ತುಪ್ಪ,ಜೇನು ತುಪ್ಪ, ಗೋಡುಂಬಿ, ದ್ರಾಕ್ಷಿ ಸೇರಿದಂತೆ ನಾನಾ ವಿಧವಾದ ಪದಾರ್ಥಗಳನ್ನು ಹಾಕುವ ಮೂಲಕ ಬುತ್ತಿ ತಯಾರಸಿ ಹೊಸ ಬಿದುರಿನ ಬುಟ್ಟಿಯಲ್ಲಿ ಹಾಕಿ ಕಟ್ಟಲಾಯಿತು. ನಂತರ ಶ್ರೀ ಸ್ವಾಮಿಯವರಿಗೆ ವಿಶೇಷ ಪೂಜಾ ಕೈಂಕರ್ಯಗಳನ್ನು ನೆಡೆಸಲಾಯಿತು.

ಮದ್ಯಾನ 3 ಗಂಟೆಗೆ ಶ್ರೀ ಸ್ವಾಮಿಯವರನ್ನು ಹಾಗೂ ಬುತ್ತಿ ಬಾನವನ್ನು ಹೊತ್ತು ಮೆರವಣಿಗೆ ಮೂಲಕ ಶ್ರೀ ದಶರಥ ರಾಮೇಶ್ವರಸ್ವಾಮಿ ಬೆಟ್ಟಕ್ಕೆ ಕೊಂಡೊಯ್ಯಲಾಯಿತು.

ಈ ಅಂಬಿನೋತ್ಸವದಲ್ಲಿ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರು ತಾವು ಹರಕೆಯ ರೂಪದಲ್ಲಿ ತಂದಿದ್ದ ಚಿಲ್ಲರೆ ಹಣವನ್ನು ದೇವರ ಮೇಲೆ ಎರಚುವ ಮೂಲಕ ಹರಕೆ ತೀರಿಸಿದರು.



ದೇವರ ಮೇಲಿಂದ ಬಿದ್ದ ಚಿಲ್ಲರೆ ಹಾಯುವ ಸಲುವಾಗಿ ಮುಗಿ ಬೀಳುತ್ತಿದ್ದ ಜನರನ್ನು ನಿಯಂತ್ರಿಸುವಲ್ಲಿ ಪೋಲೀಸರು ಹೈರಾಣಾದರು. ದೇವರ ಉತ್ಸವ ಮೂರ್ತಿಯನ್ನು ಕಂಚೀಪುರ, ಕಾನ್‌ಬೇಹಳ್ಳಿಯ ಮೂಲಕ ದಶರಥರಾಮೇಶ್ವರ ವಜ್ರಕ್ಕೆ ಕರೆತರಲಾಯಿತು.

ಮಂಗಳವಾರ ಬೆಳಿಗ್ಗೆ ದಶರಥರಾಮೇಶ್ವರಸ್ವಾಮಿ ಬೆಟ್ಟದಲ್ಲಿ ಶ್ರೀ ಕಂಚೀವರದರಾಜಸ್ವಾಮಿಗೆ ಉತ್ತರೆ ಮಳೆ ನೀರಿನಲ್ಲಿ ಗಂಗಾಸ್ನಾನ ಮಾಡಿಸಿ, ನಾಮ ಧರಸಿ ನಂತರ ಬುತ್ತಿಯನ್ನು ನೈವೇದ್ಯ ಮಾಡಿ ಆಗಮಿಸಿದ್ದ ಭಕ್ತರಿಗೆ ಪ್ರಸಾದವಾಗಿ ನೀಡಲಾಗುವುದು.

# ಬೃಹತ್ ರಕ್ತದಾನ ಶಿಬಿರ




» **ನಾಯಕನಹಟ್ಟಿ**

ನಮ್ಮಲ್ಲಿರುವ ರಕ್ತವನ್ನು ದಾನ ಮಾಡಿದಾಗ ನಮ್ಮಲ್ಲಿ ಹೊಸ ರಕ್ತ ಉತ್ಪತ್ತಿಯಾಗುತ್ತದೆ. ನಾವು ಆರೋಗ್ಯವಂತರಾಗಿ ಇನ್ನೊಂದು ಜೀವಿಯ ಉಳಿವಿಗೆ ಕಾರಣಭೂತರಾಗಿ ರಕ್ತದಾನ ಮಾಡುವುದರ ಮೂಲಕ ಜೀವ ಉಳಿಸುವ ಕಾರ್ಯದಲ್ಲಿ ನಾವೆಲ್ಲರೂ ತೊಡಗಿಸಿಕೊಂಡು ಸಾರ್ಥಕ ಜೀವನ ನಡೆಸೋಣ ಎಂದು ನಾಯಕನಹಟ್ಟಿ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳಾದ ಸಂತೋಷ್ ಹೇಳಿದರು.

ನಾಯಕನಹಟ್ಟಿ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿವಿಧ ಸಂಘ ಸಂಘಟನೆಗಳ ಮೂಲಕ ರಕ್ತದಾನ ಶಿಬಿರ ನಡೆಯಿತು. ದೀಪ ಬೆಳಗುವ ಮೂಲಕ ಉದ್ಘಾಟಿಸಿ ನಂತರ ಮಾತನಾಡಿ ಅವರು ಯುವಕರು ರಕ್ತದಾನ ಮಾಡಿ ಇನ್ನೊಂದು ಜೀವ ಉಳಿಸಿದರೆ ನಿಮಗೆ ಅನುಕೂಲವಾಗುತ್ತದೆ ಎಂದರು. ರಕ್ತದಾನ ಮಹಾದಾನ ಇದರಿಂದ ಜೀವ ಉಳಿಸಲು ಸಾಧ್ಯ, ರಕ್ತದಾನದಿಂದ ಯಾವುದೇ ತೊಂದರೆಯಾಗುವುದಿಲ್ಲ. ಆರೋಗ್ಯವಂತ ಯುವಕರು 3 ತಿಂಗಳಿಗೊಮ್ಮೆ ರಕ್ತದಾನ ಮಾಡಿ ಎಂದರು. ರಕ್ತವನ್ನು ರೋಗಿಗಳಿಗೂ ಮತ್ತು ಅಪಘಾತಕ್ಕೆ ಈಡಾದವರಿಗೆ ದಾನ ಮಾಡಲು ಯುವಕರು ಮುಂದೆ ಬಂದಲ್ಲಿ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸಿದಂತಾಗುತ್ತದೆ ಎಂದು ಅವರು ಹೇಳಿದರು.

ಕರ್ನಾಟಕ ರಕ್ಷಣಾ ವೇದಿಕೆ ಹೋಬಳಿ ಘಟಕದ ಅಧ್ಯಕ್ಷರಾದ ಮುತ್ತಯ್ಯ ಮಾತನಾಡಿ 89% ರಷ್ಟು ಪ್ರಮಾಣದಲ್ಲಿ ಹೃದಯಘಾತವನ್ನು ತಡೆಯಲು ಸಾಧ್ಯವಾಗುತ್ತದೆ. ರಕ್ತವನ್ನು ದಾನ ಮಾಡಿದರೆ ಹಲವಾರು ಜೀವ ಉಳಿಸಿದಂತಾಗುತ್ತದೆ. ಆರೋಗ್ಯವಂತ ಯುವಕರು ವರ್ಷಕ್ಕೆ ಎರಡು ಸಲ ರಕ್ತದಾನ ಮಾಡಿ ಎಂದರು. ದಾನಗಳಲ್ಲಿ ಶ್ರೇಷ್ಠದಾನ ಎಂಬ ಮಾತಿದೆ ಯಾವ ವ್ಯಕ್ತಿಗೆ ರಕ್ತದ ಅವಶ್ಯಕತೆ ಇದಿಯೋ ಅವರಿಗೆ ರಕ್ತವನ್ನು ನೀಡುವುದು ನಮ್ಮ ಪುಣ್ಯದ ಕೆಲಸ ನಾವು ಕೊಡುವ ಒಂದು ಬಾಟಲ್ ರಕ್ತ ಒಂದು ಜೀವನ್ನು ಉಳಿಸಲು ಸಾಧ್ಯ. ರಕ್ತದಾನ ಮಾಡುವುದರಿಂದ ಕೆಲವು ಸಮಸ್ಯೆಗಳು ಬರುತ್ತವೆ ಎಂಬ ಮೂಡನಂಬಿಕೆ ಹಿಂದಿನ ಕಾಲದಲ್ಲಿದೆ. ಇದರೊಂದಿಗೆ ಆತಂಕ ಗೊಂದಲ ಕೂಡ ಇದೆ. ಆದರೆ ರಕ್ತದಾನ ಮಾಡುವುದರಿಂದ ಆರೋಗ್ಯ ವೃದ್ಧಿಸುತ್ತದೆಯೇ ಹೊರೆತು ಆರೋಗ್ಯ ಕೆಡುವುದಿಲ್ಲ. ನಾಯಕನಹಟ್ಟಿ ಸಮುದಾಯ ಆರೋಗ್ಯ ಕೇಂದ್ರದ ಆಪ್ತಸಮಾಲೋಚಕರಾದ ಸುಧಾ.ಕೆ.ಬಿ,. ಪ್ರತಕರ್ತ ಹರೀಶ್ ಮಾತನಾಡಿದರು. ಡಾ॥ರೂಪ ಪೆಥಲಾಜಿಸ್ಟ್ ಜಿಲ್ಲಾ ರಕ್ತನಿಧಿ ಶಾಖೆ ಚಿತ್ರದುರ್ಗ, ಡಾ॥ಸಂತೋಷ್ ಆಡಳಿತ ವೈದ್ಯಾಧಿಕಾರಿಗಳು ಸಮುದಾಯ ಆರೋಗ್ಯ ಕೇಂದ್ರ ನಾಯಕನಹಟ್ಟಿ, ಡಾ॥ಓಬಣ್ಣ, ಪ್ರದೀಪ್ ಹಸಿರು ಕ್ರಾಂತಿ ಸೇವಾ ಸಂಸ್ಥೆ ಅಧ್ಯಕ್ಷರು ನೆಲಗೇತನಹಟ್ಟಿ, ಚಂದುಹಿರೇಮಠ್, ಕಾವ್ಯ, ನಾಗರತ್ನ, ಚೇತನ್‌ಕುಮಾರ್, ಪತ್ರಕರ್ತ ಹರೀಶ್.ಟಿ.ಟಿ ಪಾಲ್ಗೊಂಡಿದ್ದರು.

# ಅತಿಥಿ ಉಪನ್ಯಾಸಕರ ಗೌರವ ಧನ, ಸೇವಾ ಭದ್ರತೆಗೆ ಒತ್ತಾಯ

» **ಚಳ್ಳಕೆರೆ**

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುವವರಿಗೆ ಸರ್ಕಾರ ಸೂಕ್ತ ಭದ್ರತೆ ನೀಡಬೇಕು ಹಾಗೂ ಗೌರವ ಧನವನ್ನು ಹೆಚ್ಚಿಸಬೇಕೆಂದು ಶಿಕ್ಷಣ ಸಚಿವ ಮಧುಬಂಗಾರಪ್ಪನವರಿಗೆ ಮನವಿ ನೀಡಲಾಯಿತು.

ಅತಿಥಿ ಉಪನ್ಯಾಸಕರಾದ ಇಮ್ರಾನ್, ಮಧು, ಮಧುಕುಮಾರ್, ಕರುಡಪ್ಪ, ಬಸವರಾಜ್ ಅನುಸೂಯ, ನಾಗರತ್ನ, ತಿಪ್ಪೇಸ್ವಾಮಿ, ಲೋಕೇಶ್, ವೀರೇಶ್ ಮುಂತಾದವರು ಕಾರ್ಯಕ್ರಮಕ್ಕೆ ಆಗಮಿಸಿದ್ದ ಶಿಕ್ಷಣ ಸಚಿವ ಮಧುಬಂಗಾರಪ್ಪನವರು ಅತಿಥಿ ಉಪನ್ಯಾಸಕರು ಅವರನ್ನು ತಡೆದು ತಮ್ಮ ಮನವಿಯನ್ನು ಈಡೇರಿಸಬೇಕೆಂದು ಒತ್ತಾಯಿಸಿದರು.



ಸರ್ಕಾರಿ ಜೂನ್ ತಿಂಗಳಿಂದಲೇ ಅತಿಥಿ ಉಪನ್ಯಾಸಕರಿಗೆ ಕಾರ್ಯನಿರ್ವಹಿಸುವ ಜವಾಬ್ದಾರಿ ನೀಡಿದ್ದರೂ ಗೌರವ ಧನವನ್ನು ಕಡಿತಗೊಳಿಸಲಾಗಿದೆಯಲ್ಲದೆ, 10 ಗಂಟೆ ಇದ್ದ ಸಮಯವನ್ನು 12 ಗಂಟೆ ಕಾಲ ವಿಸ್ತರಿಸಲಾಗಿದೆ ಎಂದರು. ಇದೇ ಸಂದರ್ಭದಲ್ಲಿ ಜಿಲ್ಲಾ ಉಪನ್ಯಾಸಕರ ಸಂಘದ ಮಾಜಿ ಅದ್ಯಕ್ಷ ಎಸ್.ಲಕ್ಷ್ಮಣ್ ಸಹ ಅತಿಥಿ ಉಪನ್ಯಾಸಕರ ಸಮಸ್ಯೆಗಳ ನಿವಾರಣೆಗೆ ಸಚಿವರ ಮಧುಬಂಗಾರಪ್ಪ ಗಮನಹರಿಸುವಂತೆ ಮನವಿ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ಶಿಕ್ಷಣ ಸಚಿವ ಮಧುಬಂಗಾರಪ್ಪ, ಅತಿಥಿ ಉಪನ್ಯಾಸಕರ ಹಲವಾರು ಬೇಡಿಕೆಗಳನ್ನು ಈಡೇರಿಸುವ ಕುರಿತು ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರೊಂದಿಗೆ ಚರ್ಚೆ ನಡೆಸುವೆ. ನಿಮ್ಮ ಬಹುತೇಕ ಬೇಡಿಕೆಗಳು ಅಗತ್ಯವಾಗಿ ಪೂರೈಬೇಕಿದ್ದು ಈ ಬಗ್ಗೆ ಸರ್ಕಾರ ಮಟ್ಟದಲ್ಲಿ ಚರ್ಚೆ ನಡೆಸುವ ಭರವಸೆ ನೀಡಿದರು.

**ಪ್ರಮುಖ ಸುದ್ದಿ**

# ಬಂದ್‌ಗೆ ಬೆಂಬಲಿಸುವಂತೆ ಯಾದವರೆಡ್ಡಿ ಮನವಿ

» **ಚಿತ್ರದುರ್ಗ**

ಕನ್ನಡ ನಾಡಿನ ಜೀವ ನದಿ ಕಾವೇರಿ ನೀರನ್ನು ಪ್ರತಿನಿತ್ಯ ತಮಿಳುನಾಡಿಗೆ ಹರಿಸುತ್ತಿರುವ ರಾಜ್ಯ ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ವಿವಿಧ ಜನಪರ ಸಂಘಟನೆಗಳು, ಹೋರಾಟಗಾರರು, ರೈತರು ಶುಕ್ರವಾರ ಕರ್ನಾಟಕ ಬಂದ್‌ಗೆ ಕರೆ ನೀಡಿರುವುದಕ್ಕೆ ಚಿತ್ರದುರ್ಗದ ಸಮಸ್ತರು ಬೆಂಬಲಿಸುವಂತೆ ಕರ್ನಾಟಕ ಸರ್ವೋದಯ ಪಕ್ಷದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ ಮನವಿ ಮಾಡಿದರು.

ರೈತರು, ವಿವಿಧ ಸಂಘಟನೆಗಳು, ಹೋರಾಟಗಾರರ ಜೊತೆ ಪ್ರವಾಸಿ ಮಂದಿರದಲ್ಲಿ ಗುರವಾರ ನಡೆದ ಸಭೆಯಲ್ಲಿ ಚರ್ಚಿಸಿದ ಜೆ.ಯಾದವರೆಡ್ಡಿ ರಾಜ್ಯದ ಜಲಾಶಯಗಳು ನೀರಿಲ್ಲದೆ ಬರಿದಾಗುತ್ತಿರುವ ಇಂತಹ ಸಂಕಷ್ಟದ ಪರಿಸ್ಥಿತಿಯಲ್ಲಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ತಮಿಳುನಾಡಿಗೆ ನೀರು ಹರಿಸುತ್ತಿರುವುದು ಕರ್ನಾಟಕದ ಪಾಲಿಗೆ ಕರಾಳ ಶಾಸನವಿದ್ದಂತೆ. ಹಾಗಾಗಿ ಚಿತ್ರದುರ್ಗದಲ್ಲಿ ಅಂಗಡಿ ಮುಂಗಟ್ಟು, ವ್ಯಾಪಾರ ವಹಿವಾಟುಗಳನ್ನು ಸ್ವಯಂ ಪ್ರೇರಣೆಯಿಂದ ಮುಚ್ಚಿ ಕರ್ನಾಟಕ ಬಂದ್‌ಗೆ ಬೆಂಬಲಿಸಬೇಕು. ಮುನ್ನೆಚ್ಚರಿಕೆ ಕ್ರಮವಾಗಿ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಬೇಕು ಎಂದು ಜಿಲ್ಲಾಡಳಿತಕ್ಕೆ ಮನವಿ ಮಾಡಿದರು.



ಕರ್ನಾಟಕ ಮದ್ರಾಸ್ ಪ್ರಾಂತ್ಯದಲ್ಲಿದ್ದಾಗ 1932 ರಲ್ಲಿ ಆದ ಒಪ್ಪಂದದಂತೆ ಇಂದಿಗೂ ಕರ್ನಾಟಕ ರಾಜ್ಯ ಸರ್ಕಾರ ತಮಿಳುನಾಡಿಗೆ ನೀರು ಹರಿಸುತ್ತಿರುವುದು ಯಾವ ನ್ಯಾಯ? ಪ್ರತಿ ವರ್ಷವೂ ಈ ವಿವಾದ ಭುಗಿಲೇಳುತ್ತಿದೆ. ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಿ ನೀರು ಹಂಚಿಕೆ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು. ಕರ್ನಾಟಕ ಬಂದ್‌ಗೆ ನಮ್ಮ ಸಂಪೂರ್ಣ ಬೆಂಬಲವಿದೆ ಎಂದು ಹೇಳಿದರು.ಭಾರತ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು ಮಾತನಾಡಿ ಬೆಳಿಗ್ಗೆ ಆರು ಗಂಟೆಗೆ ಗಾಂಧಿವೃತ್ತದಲ್ಲಿ ಜಮಾಯಿಸಿ ನಗರದ ಎಲ್ಲಾ ಕಡೆ ಸುತ್ತಾಡಿ ಬಂದ್‌ಗೆ ಬೆಂಬಲಿಸುವಂತೆ ಜನಸಾಮಾನ್ಯರು ಹಾಗೂ ವ್ಯಾಪಾರ ವಹಿವಾಟುದಾರರಲ್ಲಿ ವಿನಂತಿಸಲಾಗುವುದು. ಅಂಗಡಿ ಮುಂಗಟ್ಟು, ವ್ಯಾಪಾರ ವಹಿವಾಟುಗಳನ್ನು ಬಂದ್ ಮಾಡುವಂತೆ ಯಾರನ್ನು ಬಲವಂತ ಮಾಡುವುದಿಲ್ಲ. ಕಾವೇರಿ ನೀರು ಇಡಿ ರಾಜ್ಯಕ್ಕೆ ಸಂಬಂಧಿಸಿದ್ದು, ಹಾಗಾಗಿ ಎಲ್ಲರೂ ಸ್ವಯಂಪ್ರೇರಿತವಾಗಿ ಬಂದ್‌ಗೆ ಬೆಂಬಲಿಸಬೇಕು ಎಂದು ಕೋರಿದರು.

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವೈ.ಕುಮಾರ್, ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್, ವಿಶ್ವನಾರಾಯಣಮೂರ್ತಿ, ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸಿ. ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್‌ಕುಮಾರ್‌ಶೆಟ್ಟಿ ಬಣದ ಜಿಲ್ಲಾಧ್ಯಕ್ಷ ಎಸ್.ಕೆ.ಮಹಂತೇಶ್, ಸಿ.ಪಿ.ಐ. ತಾಲ್ಲೂಕು ಸಹ ಕಾರ್ಯದರ್ಶಿ ಈ.ಸತ್ಯಕೀರ್ತಿ, ಗೋಪಿನಾರಾಯಣಮೂರ್ತಿ, ಸುರೇಶ, ಮಂಜುನಾಥ, ಆರ್.ಪ್ರದೀಪ್, ಸಾಯಿಕುಮಾರ್, ನವ ಕರ್ನಾಟಕ ರೈತ ಸಂಘದ ಜಿಲ್ಲಾಧ್ಯಕ್ಷ ಕೆ.ಜಯಪ್ರಕಾಶ್‌ಗೌಡ, ರೈತ ಮುಖಂಡರುಗಳಾದ ಡಿ.ಎಸ್.ಹಳ್ಳಿ ಮಲ್ಲಿಕಾರ್ಜುನ್, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಧನಂಜಯ ಹಂಪಯ್ಯನಮಾಳಿಗೆ, ಲಕ್ಷ್ಮಿಕಾಂತ್ ಇವರುಗಳು ಸಭೆಯಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T